# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1019 |
| ಸದಸ್ಯರ ಹೆಸರು | : | ಡಾ:ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 23-02-2024 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ವಿವಿಧ ಬಗೆಯ ಯೋಜನೆಗಳು ಯಾವುವು; (ವಿವರ ಒದಗಿಸುವುದು); | ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ವಿವಿಧ ಬಗೆಯ ಯೋಜನೆಗಳ ವಿವರಗಳನ್ನು ಅನುಬಂಧ-1ರಲ್ಲಿ ಹಾಗೂ ಅನುದಾನದ ಮಾಹಿತಿಯನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ.<br>ರಾಜ್ಯದಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ರೈತರಿಗೆ ನೀಡುತ್ತಿರುವ ವಿವಿಧ ಬಗೆಯ ಯೋಜನೆಗಳು ಹಾಗೂ ಸದರಿ ಯೋಜನೆಗಳಿಗೆ ಬಿಡುಗಡೆಯಾದ ಅನುದಾನದ ಮಾಹಿತಿಯನ್ನು ಅನುಬಂಧ-3 ರಲ್ಲಿ ಒದಗಿಸಲಾಗಿದೆ. |
| ಆ. | ಸದರಿ ಯೋಜನೆಗಳಿಗೆ ಕೃಷಿ ಇಲಾಖೆಯಿಂದ ಬಿಡುಗಡೆಯಾದ ಅನುದಾನವೆಷ್ಟು; (ಮಾಹಿತಿ ಒದಗಿಸುವುದು) | |
| ಇ | ಕಳೆದ 2 ವರ್ಷಗಳಲ್ಲಿ ಎಷ್ಟು ಕೃಷಿಕರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಂಡಿದ್ದಾರೆ; ಅಂಕಿ ಸಮೇತ ಬೀದರ್ & ಕಲಬುರಗಿ ಜಿಲ್ಲೆಯ ಮಾಹಿತಿ ಒದಗಿಸುವುದು? | ಕಳೆದ 2 ವರ್ಷಗಳಲ್ಲಿ ಕೃಷಿ ಇಲಾಖೆಯಿಂದ ಸೌಲಭ್ಯಗಳನ್ನು ಪಡೆದುಕೊಂಡ ರೈತರ ಅಂಕಿ ಸಹಿತ ಬೀದರ್ ಜಿಲ್ಲೆಯ ಮಾಹಿತಿಯನ್ನು ಅನುಬಂಧ-4ರಲ್ಲಿ ಮತ್ತು ಕಲಬುರಗಿ ಜಿಲ್ಲೆಯ ಮಾಹಿತಿಯನ್ನು ಅನುಬಂಧ-5ರಲ್ಲಿ ಒದಗಿಸಲಾಗಿದೆ.<br>ಕಳೆದ ಎರಡು ವರ್ಷಗಳಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳಡಿ ಬೀದರ್ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಸೌಲಭ್ಯಗಳನ್ನು ಪಡೆದುಕೊಂಡ ಫಲಾನುಭವಿಗಳ ವಿವರವನ್ನು ಅನುಬಂಧ-6ರಲ್ಲಿ ಒದಗಿಸಲಾಗಿದೆ. |

**ಸಂಖ್ಯೆ: AGRI/33/AML/2024**

**(ಎನ್. ಚಲುವರಾಯಸ್ವಾಮಿ)**
**ಕೃಷಿ ಸಚಿವರು.**

**LCQ-1019**

**ಅನುಬಂಧ-1**

# ರಾಜ್ಯದಲ್ಲಿ ಕೃಷಿ ಇಲಾಖೆಯ ವತಿಯಿಂದ ರೈತರಿಗಾಗಿ ಇರುವ ವಿವಿಧ ಯೋಜನೆಗಳು ಹಾಗೂ ಯೋಜನೆಗಳ ವಿವರ

1. **ಬೀಜಗಳ ಪೂರೈಕೆ:** ಕೃಷಿ ಇಲಾಖೆಯ ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ವಿವಿಧ ಕೃಷಿ ಬೆಳೆಗಳ (ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ) ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ. ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ. ಬಿತ್ತನೆ ಬೀಜ ವಿತರಣೆಯಲ್ಲಿ ರೈತರ ಪಹಣಿಯಲ್ಲಿನ ವಿವರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುತ್ತದೆ. ಪರಿಶಿಷ್ಟ ವರ್ಗ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ರೈತರು ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗುತ್ತದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು.

2. **ಸಸ್ಯ ಸಂರಕ್ಷಣೆ:** ಶೇ.50ರ ಸಹಾಯಧನದಡಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ, ಬೀಜೋಪಚಾರ ಆಂದೋಲನ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ತರಬೇತಿಗಾಗಿ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು.

3. **ಕೃಷಿ ಯಾಂತ್ರೀಕರಣ & ಕೃಷಿ ಸಂಸ್ಕರಣೆ:**
   *ಕೃಷಿ ಯಾಂತ್ರೀಕರಣ:* ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಈ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

   *ಕೃಷಿ ಸಂಸ್ಕರಣೆ:* ಈ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ

ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನದಡಿ ನೀಡಲಾಗುವುದು. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ.

ಇದಕ್ಕಾಗಿ Farmer Registration and Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಆರ್.ಟಿ.ಸಿ. ಯೊಂದಿಗೆ ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು ಹಾಗೂ ಕೆ-ಕಿಸಾನ್ ತಂತ್ರಾಂಶದಲ್ಲಿ ಅರ್ಜಿಯನ್ನು ಅಪ್‌ಲೋಡ್ ಮಾಡಬೇಕಾಗುತ್ತದೆ. ಅರ್ಜಿ ಸಲ್ಲಿಸಿದ ಎಲ್ಲಾ ಅರ್ಹ ರೈತರಿಗೆ ಜೇಷ್ಠತೆ ಹಾಗೂ ಅನುದಾನ ಲಭ್ಯತೆಯ ಆಧಾರದ ಮೇರೆಗೆ ಮಾರ್ಗಸೂಚಿ ಅನ್ವಯ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. ರಾಜ್ಯದ ಎಲ್ಲಾ ರೈತರಿಗೂ ಯಂತ್ರೋಪಕರಣ/ಕೃಷಿ ಸಂಸ್ಕರಣಾ ಘಟಕಗಳ ಯೋಜನೆಯ ಸೌಲಭ್ಯ ನೀಡುವ ದೃಷ್ಟಿಯಿಂದ, ಒಮ್ಮೆ ಕೃಷಿ ಯಂತ್ರೋಪಕರಣ/ಕೃಷಿ ಸಂಸ್ಕರಣಾ ಘಟಕಗಳ ಸೌಲಭ್ಯ ಪಡೆದ ರೈತರು 7 ವರ್ಷಗಳ ನಂತರ ಮತ್ತು ಕೃಷಿ ಸಂಸ್ಕರಣಾ ಕಾರ್ಯಕ್ರಮದಡಿ ಟಾರ್ಪಲಿನ್ ಸೌಲಭ್ಯ ಪಡೆದ ರೈತರು 3 ವರ್ಷಗಳ ನಂತರ ಮತ್ತೆ ಸದರಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

4. **ರೈತ ಸಿರಿ & ಸಾವಯವ ಕೃಷಿ:** ಸಾವಯವ ಕೃಷಿ ಅಳವಡಿಕೆ ಮತ್ತು ದೃಡೀಕರಣ ಕಾರ್ಯಕ್ರಮದಡಿ ರಾಜ್ಯದ ಸಾವಯವ ಪ್ರಮಾಣೀಕೃತ ಪ್ರದೇಶವನ್ನು ವಿಸ್ತರಿಸುವ ನಿಟ್ಟಿನಲ್ಲಿ ಆಸಕ್ತ ಗುಂಪು ಮತ್ತು ವ್ಯಕ್ತಿಗತ ಪ್ರಸ್ತಾವನೆಗಳ ಪ್ರಮಾಣೀಕರಣಕ್ಕಾಗಿ ಅನುದಾನ ಬಳಕೆ ಮಾಡಲಾಗುತ್ತದೆ.
ರೈತ ಸಿರಿ ಕಾರ್ಯಕ್ರಮದಡಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಬೆಳೆ ಸಮೀಕ್ಷೆ ಆಧಾರದಂತೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು ಹಾಗೂ ಸಾವಯವ ಮತ್ತು ಸಿರಿಧಾನ್ಯಗಳ ಉತ್ತೇಜನ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

5. **ಸಾವಯವ ಇಂಗಾಲ ಅಭಿಯಾನ:** ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣವನ್ನು ಹೆಚ್ಚಿಸಲು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ಶೇ. 75ರ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುವುದು ಹಾಗೂ ಹಸಿರೆಲೆ ಗೊಬ್ಬರ ಬೀಜ ಮತ್ತು ಸಾವಯವ ಗೊಬ್ಬರಗಳ ಬಳಕೆಯಿಂದ ಸಾವಯವ ಇಂಗಾಲ ಹೆಚ್ಚಿಸುವ ಕುರಿತು ಪ್ರಾತ್ಯಕ್ಷಿಕೆಗಳನ್ನು (ಪ್ರತಿ ಪ್ರಾತ್ಯಕ್ಷಿಕೆಗೆ ರೂ. 2500/-) ಆಯೋಜಿಸಲಾಗುತ್ತಿದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು.

6. **ಹೊಸ ಬೆಳೆ ವಿಮಾ ಯೋಜನೆ:** ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುತ್ತಿದೆ.

   ಈ ಯೋಜನೆಯಡಿ ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಾಗೂ ಇತರೆ ಬೆಳೆಗಳನ್ನು ಹೋಬಳಿ ಮಟ್ಟದಲ್ಲಿ ಪ್ರಥಮವಾಗಿ ಅಧಿಸೂಚಿಸಲಾಗುತ್ತದೆ. ಅಂತಿಮ ದಿನಾಂಕದೊಳಗೆ ರೈತರಿಂದ ಪ್ರೀಮಿಯಂ ಪಡೆದು ಬ್ಯಾಂಕ್ / ಸಹಕಾರ ಸಂಸ್ಥೆ / ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಬೆಳೆ ವಿಮೆ ನೋಂದಣಿ ಕಾರ್ಯ ಕೈಗೊಳ್ಳಲಾಗುತ್ತದೆ ದಾಖಲೆಗಳನ್ನು ಪರಿಶೀಲಿಸಿ ಅರ್ಹ ರೈತರ ಪ್ರಸ್ತಾವನೆಗಳನ್ನು ಸಂಬಂಧಿಸಿದ ವಿಮಾ ಸಂಸ್ಥೆಗಳಿಗೆ ಅಂಗೀಕರಿಸಲು ರವಾನಿಸಲಾಗುತ್ತದೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯು ಕ್ಷೇತ್ರಾಧಾರಿತ ಹಾಗೂ ಇಳುವರಿ ಆಧಾರಿತ ಯೋಜನೆಯಾಗಿದ್ದು, ಮಾರ್ಗಸೂಚಿಯನುಸಾರ ಹೋಬಳಿ / ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯವರು ನೀಡುವ ಬೆಳೆ ಕಟಾವು ಪ್ರಯೋಗಗಳಿಂದ ಬಂದಂತಹ ವಾಸ್ತವಿಕ ಇಳುವರಿ ಮಾಹಿತಿಯು ನಿಗದಿಪಡಿಸಲಾದ ಪ್ರಾರಂಭಿಕ ಇಳುವರಿಗಿಂತ ಕಡಿಮೆ ಇದ್ದರೆ, ಇಳುವರಿಯ ಕೊರತೆಗನುಗುಣವಾಗಿ ಹೋಬಳಿ/ ಗ್ರಾಮ ಪಂಚಾಯಿತಿಯಲ್ಲಿ ಬೆಳೆ ವಿಮೆ ಮಾಡಿಸಿದ ಎಲ್ಲಾ ರೈತರು ಬೆಳೆ ವಿಮಾ ನಷ್ಟ ಪರಿಹಾರ ಪಡೆಯಲು ಅರ್ಹರಾಗುತ್ತಾರೆ. ಅರ್ಹ ರೈತರಿಗೆ ವಿಮೆ ಪರಿಹಾರ ಮೊತ್ತವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ವಿಮಾ ಸಂಸ್ಥೆಯವರು ವರ್ಗಾಯಿಸುತ್ತಾರೆ.

7. **ಬೆಳೆ ಸಮೀಕ್ಷೆ:** ಪೂರ್ವ ಮುಂಗಾರು, ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮುಗಳಲ್ಲಿ ಬೆಳೆ ಸಮೀಕ್ಷೆ ಕೈಗೊಂಡ ಖಾಸಗಿ ನಿವಾಸಿಗಳಿಗೆ ಕೇಂದ್ರೀಕೃತ DBT k2 ಮೂಲಕ ಆಧಾರ್ ಆಧಾರಿತ ನೇರ ಗೌರವಧನ ಪಾವತಿ, ಮಾಸ್ಟರ್ ತರಬೇತುದಾರರು ಹಾಗೂ ಜಿಲ್ಲಾ ತಾಂತ್ರಿಕ ಸಲಹೆಗಾರರ ಗೌರವಧನ, ಬೆಳೆ ಸಮೀಕ್ಷೆ ಕುರಿತು ತರಬೇತಿ, ಕಾರ್ಯಾಗಾರ ಆಯೋಜನೆ, ವಿವಿಧ ಮಾಧ್ಯಮಗಳ ಮೂಲಕ ಜಾಹೀರಾತು, ಮುದ್ರಣ, ಸಿ.ಡಿ. ದಾಖಲಾತಿ, ವಿದ್ಯುನ್ಮಾನ ಮತ್ತು ವಿವಿಧ ಮಾಧ್ಯಮಗಳ ಮುಖಾಂತರ ಪ್ರಚಾರಕ್ಕಾಗಿ ತಗಲುವ ವೆಚ್ಚ, ಹೆಲ್ಪ್ ಡೆಸ್ಕ್ ಸಿಬ್ಬಂದಿ ವೇತನ ಹಾಗೂ ತಂತ್ರಾಂಶ ನಿರ್ವಹಣೆ ವೆಚ್ಚ, ಶೇ. 1ರಷ್ಟು ದತ್ತಾಂಶದ ಪರಿಶೀಲನೆ ಕೈಗೊಳ್ಳುವ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ ಸಿಬ್ಬಂದಿಗಳಿಗೆ ಗೌರವಧನ, ಬೆಳೆ ಸಮೀಕ್ಷೆ ಕಾರ್ಯತಂಡ ನಿರ್ವಹಣೆ, ಇತರೆ ಕಛೇರಿ ಮತ್ತು ಆಡಳಿತಾತ್ಮಕ ವೆಚ್ಚಕ್ಕಾಗಿ ಉಪಯೋಗಿಸಲಾಗುತ್ತದೆ. ಪಹಣಿ ಹೊಂದಿರುವ ಎಲ್ಲಾ ಹಿಡುವಳಿದಾರರು ಅರ್ಹರಿರುತ್ತಾರೆ.

8. **ಮುಖ್ಯಮಂತ್ರಿಗಳ ರೈತ ವಿದ್ಯಾನಿಧಿ:** ಎಸ್.ಎಸ್.ಎಲ್.ಸಿ/ 10ನೇ ತರಗತಿಯನ್ನು ಪೂರೈಸಿರುವ ಹಾಗೂ ರಾಜ್ಯದ ಯಾವುದೇ ಭಾಗದಲ್ಲಿ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಹಾಗೂ ಪ್ರೌಢಶಾಲಾ ಶಿಕ್ಷಣ ಪಡೆಯುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳಿಗೆ ಹಾಗೂ ಭೂರಹಿತ ಕೃಷಿ

ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ.

ಸದರಿ ಯೋಜನೆಯಡಿ:-

- 8, 9 ಮತ್ತು 10 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳು ಮತ್ತು ಎಸ್.ಎಸ್.ಎಲ್.ಸಿ /10ನೇ ತರಗತಿಯನ್ನು ಪೂರೈಸಿರುವ ಹಾಗೂ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್-ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಮಕ್ಕಳು ಈ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.

- ರೈತ ಕುಟುಂಬದ ಎಲ್ಲಾ ಮಕ್ಕಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ರೈತ ಎಂದರೆ ರಾಜ್ಯದ ಯಾವುದೇ ಭಾಗದಲ್ಲಿ ಉಳುಮೆ ಮಾಡುವಂತಹ/ ಕೃಷಿ ಮಾಡುವಂತಹ ಜಮೀನನ್ನು ತನ್ನ ಹೆಸರಿನಲ್ಲಿ ಹೊಂದಿರುವಂತಹ ವ್ಯಕ್ತಿ (ಕೃಷಿ ಇಲಾಖೆಯ FRUITS ತಂತ್ರಾಂಶದಲ್ಲಿ ಭೂಸಹಿತ FID ಸಂಖ್ಯೆ ಹೊಂದಿರಬೇಕು). ಕೃಷಿ ಕಾರ್ಮಿಕರು ಎಂದರೆ ಕೃಷಿ ಇಲಾಖೆಯ FRUITS ತಂತ್ರಾಂಶದಲ್ಲಿ ಭೂರಹಿತ FID ಸಂಖ್ಯೆ ಹೊಂದಿದ್ದು MGNREGA ಉದ್ಯೋಗ ಚೀಟಿ ಹೊಂದಿರಬೇಕು. ರೈತ ಕುಟುಂಬ ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರು.

- ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ ಇತರೆ ಯಾವುದೇ ಇಲಾಖೆಯು ನೀಡುವ ವಿದ್ಯಾರ್ಥಿ ವೇತನ ಪಡೆಯುತ್ತಿರುವ ವಿದ್ಯಾರ್ಥಿಗಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವುದಿಲ್ಲ.

**9. ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ ಪ್ರಶಸ್ತಿ:**

ಕೃಷಿ ಪಂಡಿತ ಪ್ರಶಸ್ತಿ: ಕೃಷಿ ಕ್ಷೇತ್ರದಲ್ಲಿ ವಿನೂತನ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಿಂದ ಗಮನಾರ್ಹ ಸಾಧನೆ ಮಾಡಿರುವ ಮತ್ತು ರೈತ ಸಮುದಾಯದ ಅಭಿವೃದ್ಧಿಗಾಗಿ ಕೊಡುಗೆ ನೀಡುತ್ತಿರುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪಂಡಿತ ಪ್ರಶಸ್ತಿ ನೀಡಲಾಗುತ್ತಿದೆ. ಈ ಹಿಂದೆ ಕೃಷಿ ಪಂಡಿತ ಪ್ರಶಸ್ತಿ(ಪ್ರಥಮ/ದ್ವಿತೀಯ/ತೃತೀಯ/ಉದಯೋನ್ಮುಖ) ಪಡೆದವರು ಹೊರತುಪಡಿಸಿ ಉಳಿದೆಲ್ಲಾ ರೈತ ಮತ್ತು ರೈತ ಮಹಿಳೆಯರು ಕೃಷಿ ಪಂಡಿತ ಪ್ರಶಸ್ತಿಗೆ ಸ್ಪರ್ಧಿಸಬಹುದಾಗಿರುತ್ತದೆ.

ಕೃಷಿ ಪ್ರಶಸ್ತಿ : ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸಲು ರೈತರಲ್ಲಿ ಆರೋಗ್ಯಕರ ಸ್ಪರ್ಧಾ ಮನೋಭಾವನೆಯನ್ನು ಉಂಟು ಮಾಡಿ ಅತಿ ಹೆಚ್ಚು ಇಳುವರಿ ಪಡೆಯುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪ್ರಶಸಿಯನ್ನು ನೀಡಲಾಗುತ್ತಿದೆ. ಕಳೆದ ಐದು ವರ್ಷಗಳಲ್ಲಿ ಬೆಳೆ ಸ್ಪರ್ಧೆಯಡಿ ವಿಜೇತರಾದವರನ್ನು ಹೊರತುಪಡಿಸಿ ಉಳಿದೆಲ್ಲಾ ರೈತರು ಕೃಷಿ ಪ್ರಶಸ್ತಿಗೆ ಸ್ಪರ್ಧಿಸಬಹುದಾಗಿರುತ್ತದೆ.

**10.ತರಬೇತಿ ಕಾರ್ಯಕ್ರಮಗಳು:** ಈ ಯೋಜನೆಯಡಿ ಕೃಷಿ ವಿಸ್ತರಣಾ ಅಧಿಕಾರಿಗಳ ನಿರ್ವಹಣಾ ಸಾಮರ್ಥ್ಯ ಮತ್ತು ರೈತರ/ ರೈತ ಮಹಿಳೆಯರ ವೃತ್ತಿ ಸಾಮರ್ಥ್ಯವನ್ನು ಹೆಚ್ಚಿಸಲು ಕೃಷಿ ತಾಂತ್ರಿಕತೆಗಳಿಗೆ ಸಂಬಂಧಿಸಿದಂತೆ ವಿಶೇಷ ತರಬೇತಿಗಳನ್ನು ಹಾಗೂ ಅಧ್ಯಯನ ಪ್ರವಾಸಗಳನ್ನು ಆಯೋಜಿಸಲಾಗುತ್ತದೆ.

**11.ಕೃಷಿ ಭಾಗ್ಯ:** ಮಳೆಯಾಶ್ರಿತ ಕೃಷಿ ನೀತಿ, 2014 ರನ್ವಯ 2023-24 ನೇ ಸಾಲಿನಲ್ಲಿ ರಾಜ್ಯದ 5 ಒಣ ಹವಾಮಾನ ವಲಯಗಳ 24 ಬರ ಪೀಡಿತ ಜಿಲ್ಲೆಗಳಲ್ಲಿನ 106 ತಾಲ್ಲೂಕುಗಳಲ್ಲಿ ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುವುದು. ರಾಜ್ಯದ ಮಳೆಯಾಶ್ರಿತ ಕೃಷಿಯನ್ನು ಸುಸ್ಥಿರ ಕೃಷಿಯನ್ನಾಗಿ ರೂಪಾಂತರಗೊಳಿಸುವುದು, ಸಮರ್ಪಕ ಮಳೆ ನೀರಿನ ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆ ಪದ್ಧತಿಯಿಂದ ಕೃಷಿ ಉತ್ಪಾದಕತೆಯನ್ನು ಉತ್ತಮ ಪಡಿಸುವುದು ಮತ್ತು ಆದಾಯವನ್ನು ಹೆಚ್ಚಿಸುವುದು. ಮಳೆ ನೀರನ್ನು ವ್ಯರ್ಥ ಮಾಡದೆ ಆಯ್ದ ಸ್ಥಳದಲ್ಲಿ ಕೃಷಿ ಹೊಂಡ ತೆಗೆದು ಜಲ ಸಂಗ್ರಹಿಸಿ, ಬೆಳೆಗಳ ಸಂದಿಗ್ಧ ಹಂತಗಳಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ (GI Wire Stone Fencing), ಹೊಂಡದಿಂದ ನೀರು ಎತ್ತಲು ಡೀಸೆಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್, ನೀರನ್ನು ಬೆಳೆಗೆ ಹಾಯಿಸಲು ಸೂಕ್ಷ್ಮ(ತುಂತುರು/ಹನಿ) ನೀರಾವರಿ ಘಟಕಗಳನ್ನು ಒದಗಿಸಲು ಯೋಜಿಸಲಾಗುತ್ತಿದೆ.

**ಫಲಾನುಭವಿಯ ಆಯ್ಕೆ ಮಾನದಂಡಗಳು:**

- ಕ್ಷೇತ್ರ ಪರಿಶೀಲನೆಯಲ್ಲಿ ಅರ್ಹಗೊಂಡ ರಾಜ್ಯದ 5 ಕೃಷಿ ಹವಾಮಾನ ಒಣ ವಲಯದ (ಅಚ್ಚು ಕಟ್ಟು ಪ್ರದೇಶ ಹೊರತುಪಡಿಸಿ) ಎಲ್ಲಾ ಆಸಕ್ತ ರೈತರು ಯೋಜನೆಗೆ ಅರ್ಹರಾಗಿರುತ್ತಾರೆ.
- ರೈತರ ಒಟ್ಟು ಸಾಗುವಳಿ ಕ್ಷೇತ್ರದ ಒಂದು ಸರ್ವೆ ನಂಬರ್ ನಲ್ಲಿ ಕನಿಷ್ಠ 1 ಎಕರೆ ಇರಬೇಕು (single land parcel).
- ಕೃಷಿ ಭಾಗ್ಯ ಯೋಜನೆಯ ಪೂರ್ಣ ಪ್ಯಾಕೇಜ್‌ನ ಘಟಕಗಳನ್ನು ಅನುಷ್ಠಾನಗೊಳಿಸಲು ಆಸಕ್ತಿಯಿರುವಂತಹ ರೈತರನ್ನು ಮಾತ್ರ ಆಯ್ಕೆ ಮಾಡಿ ಕ್ಷೇತ್ರ ಪರಿಶೀಲನೆ ಕೈಗೊಳ್ಳಲಾಗುವುದು.
- ಹಿಂದಿನ ಸಾಲುಗಳಲ್ಲಿ ಕೃಷಿ ಭಾಗ್ಯ ಯೋಜನೆ ಅಥವ ಇನ್ಯಾವುದೇ ಯೋಜನೆಯಡಿ ಕೃಷಿ ಹೊಂಡ ಫಲಾನುಭವಿಯಾಗಿರುವ ರೈತರು ಸದರಿ ಯೋಜನೆಗೆ ಅರ್ಹತೆ ಹೊಂದಿರುವುದಿಲ್ಲ
- ಪರಿಶಿಷ್ಠ ಜಾತಿ/ಪ.ಪಂಗಡ ರೈತರು ಸರ್ಕಾರದ ನಿರ್ದಿಷ್ಟ ಅನುಪಾತದನ್ವಯ ಅರ್ಹರಾಗಿರುತ್ತಾರೆ.

**12.ಹೈಟೆಕ್ ಹಾರ್ವೆಸ್ಟರ್ ಹಬ್**- ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಹಂತ ಹಂತವಾಗಿ ಸ್ಥಾಪಿಸಲು ರಾಜ್ಯದಲ್ಲಿ ಪ್ರಚಲಿತವಿರುವ ಕೃಷಿ ಯಂತ್ರಧಾರೆ ಕೇಂದ್ರಗಳು / ರೈತ ಉತ್ಪಾದಕ ಸಂಸ್ಥೆಗಳು / ಸೇವಾದಾರ ಸಂಸ್ಥೆಗಳು / ವೈಯಕ್ತಿಕ ಫಲಾನುಭವಿಗಳನ್ನು ಒಳಗೊಂಡಂತೆ ಅರ್ಹತೆಯಿರುವ ಸಂಸ್ಥೆಗಳನ್ನು / ವೈಯಕ್ತಿಕ ಫಲಾನುಭವಿಗಳನ್ನು ಆಯ್ಕೆ ಮಾಡಿ ಅವಶ್ಯಕತೆಯಿರುವ ಪ್ರದೇಶಗಳಲ್ಲಿ Hi-Tech Harvester Hubs ಗಳನ್ನು ಸ್ಥಾಪಿಸಲಾಗುವುದು. ಸದರಿ ಕೇಂದ್ರಗಳಲ್ಲಿ ದಾಸ್ತಾನೀಕರಿಸುವ Hi-Tech ಕಟಾವು /

ಒಕ್ಕಣೆ ಯಂತ್ರಗಳಿಗೆ ಸಮನ್ಯ ವರ್ಗದ ರೈತರಿಗೆ ಗರಿಷ್ಠ ಶೇ.50 ರಂತೆ , ಪ.ಜ ./ಪ.ಪಂ. ವರ್ಗದ ರೈತರಿಗೆ ಗರಿಷ್ಠ ಶೇ.70 ರಂತೆ ಹಾಗೂ ಸಂಘ-ಸಂಸ್ಥೆಗಳಿಗೆ (ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆ / FPO ಗಳ ನ್ನೊಳಗೊಂಡಂತೆ) ಗರಿಷ್ಠ ಶೇ.70 ರಂತೆ ಸಹಾಯಧನವನ್ನು ಒದಗಿಸಲಾಗುವುದು. ಸದರಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುವುದು. ಪ್ರತಿ ಕೇಂದ್ರಕ್ಕೆ ಒಮ್ಮೆ ಮಾತ್ರ ಆಡಳಿತಾತ್ಮಕ ವೆಚ್ಚವಾಗಿ ರೂ.5.00 ಲಕ್ಷಗಳನ್ನು ಒದಗಿಸಲಾಗುತ್ತದೆ.

13. **ಕೃಷಿ ನವೋದ್ಯಮ:** ಕೃಷಿ ಕ್ಷೇತ್ರದಲ್ಲಿ ಉದ್ಯಮಶೀಲತೆಯನ್ನು ಹೆಚ್ಚಿಸಲು ಹಾಗೂ ಗ್ರಾಮೀಣ ಭಾಗದ ಯುವಕರಿಗೆ ಉದ್ಯೋಗ ಸೃಜನೆಗಾಗಿ ಕೃಷಿಯಲ್ಲಿನ ನೂತನ ತಾಂತ್ರಿಕತೆಗಳು ಹಾಗೂ ನವೀನ ಪರಿಕಲ್ಪನೆಗಳ ವಾಣಿಜ್ಯೀಕರಣವನ್ನು ಉತ್ತೇಜಿಸುವ ಗುರಿಯೊಂದಿಗೆ ಕೃಷಿ ನವ್ಯೋದ್ಯಮ ಕಾರ್ಯಕ್ರಮವನ್ನು 2023-24ನೇ ಸಾಲಿನಲ್ಲಿ ಅನುಷ್ಠಾನ ಮಾಡಲಾಗುತ್ತದೆ. ಈ ಯೋಜನೆಯು 3 ಪ್ರಮುಖ ಘಟಕಗಳನ್ನು ಒಳಗೊಂಡಿರುತ್ತದೆ:
    - ಹೊಸ ಕೃಷಿ ನವೋದ್ಯಮಗಳಿಗೆ (Startups at Incubation Stage) ಆರ್ಥಿಕ ನೆರವು: ಹೊಸ ಕೃಷಿ ನವೋದ್ಯಮಿಗಳಿಗೆ ಅನುಮೋದಿತ ಯೋಜನಾ ವರದಿಯ ಶೇಕಡ 50 ರಷ್ಟು ಸಹಾಯಧನವನ್ನು (ಕನಿಷ್ಟ-ರೂ. 5.00 ಲಕ್ಷದಿಂದ ಗರಿಷ್ಟ ರೂ. 20 ಲಕ್ಷಗಳವರೆಗೆ) ಬ್ಯಾಂಕ್ ಸಾಲದ ಮುಖಾಂತರ (Backended subsidy) ನೀಡಲಾಗುತ್ತದೆ.
    - ಈಗಾಗಲೇ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆ ಅಥವಾ ಮೇಲ್ದರ್ಜೆಗೇರಿಸಲು (Scale up of business/Expansion of established Startups) ಆರ್ಥಿಕ ನೆರವು: ಈಗಾಗಲೇ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆಗಾಗಿ ಹಾಗೂ ಉನ್ನತೀಕರಣಕ್ಕಾಗಿ ಯೋಜನಾ ವರದಿಯ ಶೇಕಡ 50 ರಷ್ಟು ಸಹಾಯಧನವನ್ನು (ಕನಿಷ್ಟ-ರೂ. 20 ಲಕ್ಷದಿಂದ ಗರಿಷ್ಟ ರೂ. 50 ಲಕ್ಷಗಳವರೆಗೆ) ಕೃಷಿ ವಲಯದ ನವೋದ್ಯಮಿಗಳಿಗೆ ಬ್ಯಾಂಕ್ ಸಾಲದ ಮುಖಾಂತರ (Backended subsidy) ನೀಡಲಾಗುತ್ತದೆ.
    - ಕೃಷಿ ನವೋದ್ಯಮಗಳ ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮ (Mentoring and Acceleration Programme –MAP): ಆಯ್ಕೆಯಾದ ನವೋದ್ಯಮಿಗಳ ಸಾಮರ್ಥ್ಯಾಭಿವೃದ್ಧಿಗೆ ಕೃಷಿ ವಿಶ್ವವಿದ್ಯಾಲಯ, ICAR, CFTRI, CSIR, C-CAMP, ಹಾಗೂ ಇತರೆ ಸಂಶೋದನಾ ಸಂಸ್ಥೆಗಳಿಂದ ತರಬೇತಿಗಳನ್ನು ನೀಡಲಾಗುತ್ತದೆ.

ಅರ್ಹತೆ:

- Agri- Startup ನೋಂದಣಿ: ಅರ್ಜಿ ಸಲ್ಲಿಸುವ Agri- Startup ಗಳು Private Limited company (Companies Act, 2013) ಅಥವಾ Partnership Firm (registered under section 59 of the Partnership Act, 1932) ಅಥವಾ Limited Liability Partnership (the Limited Liability Partnership Act, 2008) ನಡಿ ಕಡ್ಡಾಯವಾಗಿ ಕರ್ನಾಟಕದಲ್ಲಿ ನೋಂದಣಿಯಾಗಿರಬೇಕು.
- ವ್ಯವಹಾರ ಗಳಿಕೆ (Turnover) : ನೋಂದಣಿಯಿಂದ ಇಲ್ಲಿಯವರೆಗೆ ಯಾವುದೇ ಆರ್ಥಿಕ ವರ್ಷದಲ್ಲಿ ವ್ಯವಹಾರ ಗಳಿಕೆಯು ರೂ. 100.00 ಕೋಟಿ ಮೀರುವಂತಿಲ್ಲ.

- ವರ್ಷಾವಧಿ: ಯಾವುದೇ Agri- Startup ನೋಂದಣಿಯಿಂದ ಇಲ್ಲಿಯವರೆಗೆ 10 ವರ್ಷ ಮೀರಿರುವಂತಿಲ್ಲ
- ಕಾರ್ಯವೈಖರಿ: Agri- Startup ಗಳು ಕೃಷಿ ವಲಯಕ್ಕೆ ಸಂಬಂಧಿಸಿದ್ದಾಗಿದ್ದು ನೂತನ ಆವಿಷ್ಕಾರಗಳು, ಉಪಯೋಗಕಾರಿ ಉತ್ಪನ್ನಗಳು ಹಾಗೂ ಸೇವೆಗಳನ್ನು ಒಳಗೊಂಡಿದ್ದು ಉದ್ಯೋಗ ಸೃಜನೆ ಸಾಮರ್ಥ್ಯ ಹೊಂದಿರಬೇಕು.

**14.ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ:** ಈ ಯೋಜನೆಯಡಿ ಬತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಭತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ ಹಾಗೂ ಕೃಷಿ ಉಪಕರಣಗಳನ್ನು ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಿಗೆ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹ ಧನ ನೀಡಲಾಗುತ್ತಿದೆ.

ಸದರಿ ಯೋಜನೆಯಡಿ:-

- ಎಲ್ಲಾ ರೈತರು ಅರ್ಹರಾಗಿದ್ದು, FRUITS Portal ನಲ್ಲಿ ಕಡ್ಡಾಯವಾಗಿ ನೋಂದಣಿ ಹೊಂದಿರಬೇಕು.
- ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆಯ ಅನುಷ್ಠಾನ ಕುರಿತು ಭಾರತ ಸರ್ಕಾರದ ನಿರ್ಣಯದಂತೆ ಯೋಜನೆಯ ಒಟ್ಟಾರೆ ಅನುದಾನದಲ್ಲಿ ವಿಶೇಷ ಘಟಕ ಉಪಯೋಜನೆಗೆ ಮತ್ತು ಗಿರಿಜನ ಉಪ ಯೋಜನೆಗೆ ಮೀಸಲಿರಿಸಿರುವ ಅನುದಾನವನ್ನು ಆಯಾ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನಸಂಖ್ಯೆ ಮತ್ತು ಭೂ ಹಿಡುವಳಿಯನ್ನಾಧರಿಸಿ ನಿಗದಿಪಡಿಸಿ ಬಿಡುಗಡೆಗೊಳಿಸಲಾಗುವುದು.
- ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಅನುದಾನದ ಕನಿಷ್ಠ ಶೇ.33 ರಷ್ಟು ಹಾಗು ಮಹಿಳಾ ರೈತರಿಗೆ ಅನುದಾನದ ಕನಿಷ್ಠ ಶೇ.30 ರಷ್ಟನ್ನು ಮೀಸಲಿರಿಸುವುದು.
- ಒಂದು ಹಂಗಾಮಿನಲ್ಲಿ ಯೋಜನೆಯ ವಿವಿಧ ಘಟಕಗಳಡಿ ಸಹಾಯಧನವನ್ನು ಪಡೆಯಲು ಎಲ್ಲಾ ವರ್ಗದ ರೈತರಿಗೂ 5 ಹೆಕ್ಟೇರ್ ಕ್ಷೇತ್ರ ವಿಸ್ತೀರ್ಣವನ್ನು ಮಿತಿಗೊಳಿಸಲಾಗಿರುತ್ತದೆ.
- ಒಂದು ಹಂಗಾಮಿನಲ್ಲಿ ಪ್ರಾತ್ಯಕ್ಷಿಕೆಯಡಿ ಸಹಾಯಧನ ಪಡೆಯಲು ಎಲ್ಲಾ ವರ್ಗದ ಫಲಾನುಭವಿ ರೈತರುಗಳಿಗೆ ಗರಿಷ್ಟ 2 ಹೆಕ್ಟೇರ್ ಕ್ಷೇತ್ರ ವಿಸ್ತೀರ್ಣವನ್ನು ಮಿತಿಗೊಳಿಸಲಾಗಿರುತ್ತದೆ.

**15.ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಅನುಷ್ಠಾನ ಮಾಡಲಾಗುತ್ತಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅನುಷ್ಠಾನಕ್ಕೆ ತೋಟಗಾರಿಕೆ ಇಲಾಖೆಯು ನೋಡಲ್ ಇಲಾಖೆಯಾಗಿರುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು

60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಸಹಾಯಧನವನ್ನು ಸೇರಿಸಿ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ.

ಸದರಿ ಯೋಜನೆಯಡಿ:-

- ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ತುಂತುರು ನೀರಾವರಿಗೆ ಶೇ.90 ರ ಸಹಾಯಧನ.
- ಸಣ್ಣ / ಅತಿ ಸಣ್ಣ / ಪ.ಜಾ / ಪ.ಪಂ. ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಹನಿ ನೀರಾವರಿಗೆ ಶೇ.90 ರ ಸಹಾಯಧನ.
- ಉಳಿದ ಎಲ್ಲಾ ರೈತರ ವರ್ಗಕ್ಕೆ 5.0 ಹೆಕ್ಟೇರ್ ಪ್ರದೇಶದವರೆಗೆ ಶೇ.45 ರ ಸಹಾಯಧನ.
- ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ, ಒಮ್ಮೆ ಸೂಕ್ಷ್ಮ ನೀರಾವರಿ ಸೌಲಭ್ಯ ಪಡೆದ ರೈತರು 7 ವರ್ಷಗಳ ನಂತರ ಮತ್ತೆ ಸೂಕ್ಷ್ಮ ನೀರಾವರಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಆದರೆ, ರಾಜ್ಯದ ಎಲ್ಲಾ ರೈತರಿಗೂ ಪರಿಶಿಷ್ಟ ಜಾತಿ ಹಾಗು ಪರಿಶಿಷ್ಟ ಪಂಗಡದ ರೈತರನ್ನು ಹೊರತು ಪಡಿಸಿ ಸದರಿ ಯೋಜನೆಯ ಸೌಲಭ್ಯ ನೀಡುವ ದೃಷ್ಟಿಯಿಂದ, 7 ವರ್ಷಗಳ ನಂತರ ಸದರಿ ಸೌಲಭ್ಯ ನೀಡುವುದನ್ನು ಕಡಿತಗೊಳಿಸಿ, ಕೇವಲ ಒಂದು ಬಾರಿಗೆ ಮಿತಿಗೊಳಿಸಲಾಗಿದೆ.
- ಇದಕ್ಕಾಗಿ Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ನೀರಾವರಿ ಸೌಲಭ್ಯ ಹೊಂದಿರುವ ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಆರ್.ಟಿ.ಸಿ. (ಪಹಣಿ) ಯೊಂದಿಗೆ ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು ಹಾಗೂ ಕೆ-ಕಿಸಾನ್‌ನಲ್ಲಿ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಪ್ ಲೋಡ್ ಮಾಡಬೇಕು. ರೈತರು ಜೇಷ್ಠತೆ ಹಾಗೂ ಅನುದಾನ ಲಭ್ಯತೆಯ ಆಧಾರದ ಮೇರೆಗೆ ದಾಖಲಾತಿಗಳನ್ನು ಸಲ್ಲಿಸಿದ ರೈತರಿಗೆ ವಿತರಿಸಿದ / ರೈತರ ಹೊಲದಲ್ಲಿ ಅಳವಡಿಸಿದ ಸೂಕ್ಷ್ಮ ನೀರಾವರಿ ಸಲಕರಣೆಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ.

**16. ಕೃಷಿ ವಿಸ್ತರಣೆ ಉಪ ಅಭಿಯಾನ:** ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯು ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರಿ/ ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ. ಯೋಜನೆಯಡಿ ಆಯೋಜಿಸುವ ವಿಸ್ತರಣಾ ಕಾರ್ಯಕ್ರಮಗಳಲ್ಲಿ ಎಲ್ಲಾ ವರ್ಗದ ರೈತರು / ರೈತ ಮಹಿಳೆಯರ ಪಾಲ್ಗೊಳ್ಳುವಿಕೆ ಅವಕಾಶವಿರುತ್ತದೆ.

**17. ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM):** ರಾಜ್ಯದಲ್ಲಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು, ಕೃಷಿ ಕಾರ್ಮಿಕರ ಸಮಸ್ಯೆಯನ್ನು ನೀಗಿಸಲು, ಹೆಚ್ಚಿನ ಇಳುವರಿ ಪಡೆಯಲು ನೆರವಾಗುವಂತೆ ಸಹಕಾರಿಯಾಗಲು ಹಾಗೂ ಕ್ಷೇತ್ರ ಶಕ್ತಿಯನ್ನು (ಪ್ರಸ್ತುತವಿರುವ 2.115 KW/ Ha to 2.5kW/Ha by 2023 and 4.00kW/ha by 2030) ಹೆಚ್ಚಿಸಲು ಕೃಷಿ ಯಾಂತ್ರೀಕರಣ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ರೈತರಿಗೆ ಟ್ರ್ಯಾಕ್ಟರ್(45HP ವರೆಗೆ), ಪವರ್ ಟಿಲ್ಲರ್‌ಗಳ ಜೊತೆಗೆ ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಶಕ್ತಿ ಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಶಕ್ತಿ ಚಾಲಿತ ಅಂತರ ಬೇಸಾಯ ಉಪಕರಣಗಳು, ಕೊಯ್ಲು ಮತ್ತು ಸಂಸ್ಕರಣಾ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ಡೀಸೆಲ್ ಪಂಪ್‌ಸೆಟ್ ಗಳು ಇತ್ಯಾದಿ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. ಹೀಗೆ ಉಳುಮೆಯಿಂದ ಕೊಯ್ಲಿನವರೆಗೆ ಹಾಗು ಕೊಯ್ಲು ನಂತರ ಉಪಯುಕ್ತವಾಗುವ ವಿವಿಧ ನಮೂನೆಯ ಕೃಷಿ ಉಪಕರಣಗಳನ್ನು ಸಹಾಯಧನದಡಿ ರೈತರಿಗೆ ಒದಗಿಸಲಾಗುತ್ತಿದೆ.

ಸದರಿ ಯೋಜನೆಯಡಿ:-

- ಕೃಷಿ ಯಂತ್ರೋಪಕರಣಗಳಿಗೆ ಸಂಬಂಧಿಸಿದಂತೆ ಪ್ರತಿ ರೈತ ಫಲಾನುಭವಿಗಳಿಗೆ (Individual farmers) (ಟ್ರಾಕ್ಟರ್ ಹೊರತುಪಡಿಸಿ) ಸಾಮಾನ್ಯ ರೈತರಿಗೆ ಶೇ.50 ರಷ್ಟು ಸಹಾಯಧನ ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಟ ಮಿತಿ ರೂ.1.00 ಲಕ್ಷದವರೆಗೆ ನೀಡಲಾಗುತ್ತಿದೆ.
- ರೈತರು ಒಂದಕ್ಕಿಂತ ಹೆಚ್ಚು ವಿವಿಧ ಉಪಕರಣಗಳಿಗೆ (ಪುನರಾವರ್ತನೆಯಾಗದಂತೆ) ಗರಿಷ್ಠ ರೂ.1.00 ಲಕ್ಷದವರೆಗೆ ಸಹಾಯಧನವನ್ನು ಪಡೆಯಬಹುದಾಗಿರುತ್ತದೆ.
- 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.
- ರೈತರು ಯಾವುದಾದರು ಉಪಕರಣವನ್ನು ರಿಯಾಯಿತಿ ದರದಲ್ಲಿ ಕೃಷಿ ಇಲಾಖೆ ಮತ್ತು ಕೃಷಿ ಸಂಬಂಧಿತ ಇಲಾಖೆಗಳ ಮೂಲಕ ಪಡೆದಿದ್ದಲ್ಲಿ, ಅದೇ ಉಪಕರಣವನ್ನು ಮುಂದಿನ ಏಳು ಆರ್ಥಿಕ ವರ್ಷಗಳಲ್ಲಿ ರಿಯಾಯಿತಿ ದರಗಳಲ್ಲಿ ಪಡೆಯಲು ಅರ್ಹರಿರುವುದಿಲ್ಲ.
- ಕೇಂದ್ರ ಸರ್ಕಾರವು ನಿಗದಿ ಪಡಿಸಿರುವ ತಾಂತ್ರಿಕ ಮಾನದಂಡಗಳನ್ನು ಪರಿಗಣಿಸಿ ಯಂತ್ರೋಪಕರಣಗಳನ್ನು ಸರಬರಾಜು ಮಾಡುವ ಸಂಸ್ಥೆಗಳನ್ನು ಕೃಷಿ ಇಲಾಖೆಯ ವತಿಯಿಂದ ಎಂಪ್ಯಾನೆಲ್ ಮಾಡಲಾಗಿರುತ್ತದೆ. ಸದರಿ ಎಂಪ್ಯಾನಲ್/ದರ ಕರಾರು ಸಂಸ್ಥೆಗಳ ಎಂಪ್ಯಾನಲ್‌ಗೊಂಡಿರುವ ಯಂತ್ರೋಪಕರಣಗಳನ್ನು ಮಾತ್ರ ಸಹಾಯಧನ ಯೋಜನೆಯಡಿ ವಿತರಿಸಲಾಗುತ್ತಿದೆ.
- FRUITS (Farmers Registration and Unified Beneficiary Information System) Portal ತಂತ್ರಾಂಶದಲ್ಲಿ ನೊಂದಾಯಿತರಾದ ರೈತರು ಮಾತ್ರ ತಾವು

ಇಚ್ಛಿಸುವ ಯಂತ್ರೋಪರಕರಣಗಳಿಗೆ ಕೆ-ಕಿಸಾನ್ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

- ರೈತರು ತಾವು ಇಚ್ಛಿಸುವ ಯಂತ್ರೋಪಕರಣಗಳಿಗೆ ಕೆ-ಕಿಸಾನ್ ಪೋರ್ಟಲ್‌ನ Citizen Centric login (kkisan.karnataka.gov.in) ಅಥವಾ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.
- ರೈತರು ಸಲ್ಲಿಸುವ ಅರ್ಜಿಗಳ ಜೇಷ್ಠತೆ ಆಧಾರದ ಮೇಲೆ, ರೈತರ ವರ್ಗದ ಆಧಾರದ ಮೇಲೆ ಮತ್ತು ಅನುದಾನ ಲಭ್ಯತೆ ಆಧಾರದ ಮೇಲೆ ಸಹಾಯಧನ ಯೋಜನೆಗಳಡಿ ರೈತರಿಗೆ ಯಂತ್ರೋಪಕರಣಗಳನ್ನು ವಿತರಿಸಲಾಗುತ್ತಿದೆ.

**18.ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮ:** ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆ, ತಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವ ಉದ್ದೇಶದಿಂದ ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟಾರೆಯಾಗಿ 4000 ಸಮಗ್ರ ಕೃಷಿ ಪದ್ಧತಿ ಮಾದರಿಗಳನ್ನು ಅನುಷ್ಠಾನಗೊಳಿಸಲು ಕಾರ್ಯಕ್ರಮವನ್ನು ರೂಪಿಸಿದ್ದು ಅದರಂತೆ ಅನುಷ್ಠಾನ ಮಾಡಲಾಗುತ್ತಿದೆ.

**19.ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds):** ಈ ಯೋಜನೆಯಡಿ ಎಣ್ಣೆ ಕಾಳುಗಳ ಉತ್ಪಾದನೆಯನ್ನು ಹೆಚ್ಚಿಸಲು ನೂತನ/ಸುಧಾರಿತ ತಾಂತ್ರಿಕತೆಗಳ ದೊಡ್ಡ ಪ್ರಮಾಣದ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಪೀಡೆನಾಶಕಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ, ಕೃಷಿ ಉಪಕರಣಗಳು ಹಾಗೂ ನೀರು ಒದಗಿಸುವ ಪೈಪುಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೇ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಪ್ರತಿ ಕ್ವಿಂಟಾಲ್ ಬಿತ್ತನೆ ಬೀಜೋತ್ಪಾದನೆಗೆ ರೂ.2500/-ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.

ಸದರಿ ಯೋಜನೆಯಡಿ:-

- ಎಲ್ಲಾ ರೈತರು ಅರ್ಹರಾಗಿದ್ದು, FRUITS Portal ನಲ್ಲಿ ಕಡ್ಡಾಯವಾಗಿ ನೋಂದಣಿ ಹೊಂದಿರಬೇಕು.
- ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯ ಅನುಷ್ಠಾನ ಕುರಿತು ಭಾರತ ಸರ್ಕಾರದ ನಿರ್ಣಯದಂತೆ ಯೋಜನೆಯ ಒಟ್ಟಾರೆ ಅನುದಾನದಲ್ಲಿ ವಿಶೇಷ ಘಟಕ ಉಪಯೋಜನೆಗೆ ಮತ್ತು ಗಿರಿಜನ ಉಪಯೋಜನೆಗೆ ಮೀಸಲಿರಿಸಿರುವ ಅನುದಾನವನ್ನು ಆಯಾ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನಸಂಖ್ಯೆ ಮತ್ತು ಭೂ ಹಿಡುವಳಿಯನ್ನಾಧರಿಸಿ ನಿಗಧಿಪಡಿಸಿ ಬಿಡುಗಡೆಗೊಳಿಸಲಾಗುತ್ತಿದೆ.
- ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಅನುದಾನದ ಕನಿಷ್ಟ ಶೇ.33 ರಷ್ಟು ಹಾಗು ಮಹಿಳಾ ರೈತರಿಗೆ ಅನುದಾನದ ಕನಿಷ್ಟ ಶೇ.30 ರಷ್ಟನ್ನು ಮೀಸಲಿರಿಸುವುದು.
- ಅಧ್ಯಕ್ಷರು, ಜಿಲ್ಲಾ ಮಟ್ಟದ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ ಎಣ್ಣೆಕಾಳು ಕಾರ್ಯಕಾರಿ ಸಮಿತಿ ಇವರಿಂದ ರಚಿಸಲ್ಪಟ್ಟ ಬೀಜ ಸಮಿತಿಯು

ಜಿಲ್ಲೆಯಲ್ಲಿ ಬಂದಿರುವ ಬೀಜ ಬೇಡಿಕೆ, ವಿತರಣೆ ಮತ್ತು ಫಲಾನುಭವಿಗಳ ಪಟ್ಟಿಯನ್ನು ಪರಿಶೀಲಿಸುವುದು. ಬಿತ್ತನೆ ಬೀಜ ಸಹಾಯಧನದ ಅನುದಾನವು ಕೇಂದ್ರ ಮಟ್ಟದಲ್ಲಿ ವಿತರಣೆಯಾಗಿದ್ದಲ್ಲಿ ವಿತರಣೆಯ ನಂತರ ಫಲಾನುಭವಿಗಳ ಪಟ್ಟಿಯನ್ನು ಐಚ್ಛಿಕವಾಗಿ ಪರಿಶೀಲಿಸಿ ಅನುಮೋದಿಸಲಾಗುತ್ತದೆ.

20. **ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ:** ವ್ಯಕ್ತಿಗತ ಕಿರು ಉದ್ದಿಮೆಗಳಿಗೆ ಬೆಂಬಲ, ರೈತ ಉತ್ಪಾದಕರ ಸಂಸ್ಥೆಗಳು/ ಉತ್ಪಾದಕ ಸೊಸೈಟಿಗಳಿಗೆ ಸಹಾಯಧನ, ಸ್ವಸಹಾಯ ಸಂಘಗಳ ಸದಸ್ಯರಿಗೆ ಕಾರ್ಯ ನಿರ್ವಹಣಾ ಬಂಡವಾಳ ಹಾಗೂ ಪರಿಕರಗಳ ಖರೀದಿಗೆ ಪ್ರಾಥಮಿಕ ಬಂಡವಾಳ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆಗೆ ಬೆಂಬಲ, ರಾಜ್ಯದ ತಾಂತ್ರಿಕ ಸಂಸ್ಥೆಗಳಲ್ಲಿ ಆಹಾರ ಸಂಸ್ಕರಣಾ ಉದ್ಯಮಿಗಳಿಗೆ ತರಬೇತಿ ನೀಡಲು ಹಾಗೂ ಪ್ರಾಯೋಗಿಕ ಉತ್ಪಾದನೆ ಕೈಗೊಳ್ಳಲು ಇನ್ ಕ್ಯುಬೇಷನ್ ಕೇಂದ್ರಗಳ ಸ್ಥಾಪನೆಗೆ ಅನುದಾನವನ್ನು ನೀಡಲಾಗುವುದು. KAPPEC ಸಂಸ್ಥೆಯು ಈ ಯೋಜನೆಯ ಅನುಷ್ಠಾನಕ್ಕೆ ನೋಡಲ್ ಇಲಾಖೆಯಾಗಿರುತ್ತದೆ.

    ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅನುದಾನವನ್ನು ನೀಡಲಾಗುತ್ತಿದೆ.

21. **ಮಣ್ಣು ಆರೋಗ್ಯ ಮತ್ತು ಫಲವತ್ತತೆ ಯೋಜನೆ (ಆರ್.ಕೆ.ವಿ.ವೈ):** ಮಣ್ಣು ಮಾದರಿ ಸಂಗ್ರಹಣೆ, ವಿಶ್ಲೇಷಣೆ ಮತ್ತು ಮಣ್ಣು ಆರೋಗ್ಯ ಚೀಟಿ ವಿತರಣೆ, ಪ್ರಾತ್ಯಕ್ಷಿಕೆ,ತರಬೇತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ( ರೂ 0.05ಲಕ್ಷಗಳು ಪ್ರತಿ ಘಟಕ), ಸಮಸ್ಯಾತ್ಮಕ ಮಣ್ಣುಗಳ ನಿರ್ವಹಣೆ: ಕೃಷಿ ಸುಣ್ಣ/ಜಿಪ್ಸಂ, ಹಸಿರೆಲೆ ಗೊಬ್ಬರ, ಬದುಗಳ ನಿರ್ಮಾಣ ಪ್ರತಿ ಹೆಕ್ಟೇರ್ ಗೆ ನಿಗದಿಪಡಿಸಿದ ದರವನ್ನು ಪರಿಕರಗಳ ರೂಪದಲ್ಲಿ ನೀಡಲಾಗುತ್ತದೆ. ಹೊಸ ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಸ್ಥಾಪನೆ, ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಬಲವರ್ಧನೆ, ರಸಗೊಬ್ಬರ ನಿಯಂತ್ರಣ ಪ್ರಯೋಗಾಲಯಗಳ ಬಲವರ್ಧನೆ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

**LCQ 1019 ಅನುಬಂಧ- 2**

**~~ಪೂರಕ ಟಿಪ್ಪಣಿ~~ (ಪ್ರಶ್ನೆ ಸಂ: ಆ)**

**2023-24ನೇ ಸಾಲಿನ ರಾಜ್ಯದ ಕೃಷಿ ಇಲಾಖೆಯಲ್ಲಿ ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಅನುದಾನದ ವಿವರ (ಜನವರಿ 2024ರ ಅಂತ್ಯಕ್ಕೆ) (ರೂ.ಲಕ್ಷಗಳಲ್ಲಿ)**

| ಕ್ರ.ಸಂ | ಯೋಜನೆ ಮತ್ತು ಲೆಕ್ಕ ಶೀರ್ಷಿಕೆ | ಬಿಡುಗಡೆ |
|---|---|---|
| I | **ರಾಜ್ಯ ವಲಯ ಯೋಜನೆಗಳು** | |
| 1 | ಮುಖ್ಯಮಂತ್ರಿ ರೈತ ವಿದ್ಯಾನಿಧಿ (2202-80-107-0-06) | 15480.00 |
| 2 | ಕೃಷಿ ಆಯುಕ್ತಾಲಯ (2401-00-001-1-01) | 14794.65 |
| 3 | ಖಾಲಿ ಹುದ್ದೆಗಳಿಗಾಗಿ ಅನುದಾನ (2401-00-001-1-50) | 0.00 |
| 4 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ (2401-00-001-1-75) | 44.84 |
| 5 | ರೈತರ ಪ್ರೋತ್ಸಾಹ & ಬೆಂಬಲ ಯೋಜನೆಗಳು (2401-00-102-0-28) | 358.67 |
| 6 | ರೋಗಗಳಿಂದ ಹಾನಿಗೊಳಗಾದ ಬೆಳೆಗಳಿಗೆ ಪರಿಹಾರ (2401-00-102-0-32) | 22300.00 |
| 7 | ಕೃಷಿ ಪರಿಕರಗಳು & ಗುಣಮಟ್ಟ ನಿಯಂತ್ರಣ (2401-00-103-0-15) | 37788.31 |
| 8 | ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಕಾರ್ಯಕ್ರಮಗಳು (2401-00-104-0-12) | 833.33 |
| 9 | ಹೊಸ ಬೆಳೆ ವಿಮಾ ಯೋಜನೆ (2401-00-104-0-12) | 49998.00 |
| 10 | ಬೆಳೆ ಸಮೀಕ್ಷೆ (2401-00-111-0-10) | 6499.98 |
| 11 | ಕೃಷಿ ಭಾಗ್ಯ (2401-00-102-0-27) | 0.00 |
| 12 | ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಗೆ ರಾಜ್ಯದ ಹೆಚ್ಚುವರಿ ಪಾಲಿನ ಅನುದಾನ (2401-00-108-1-15) | 9376.03 |
| 13 | ಕೃಷಿ ಮೂಲಭೂತ ಸೌಕರ್ಯ (4401-00-001-1-01) | 1123.80 |
| | **ರಾಜ್ಯ ವಲಯ ಯೋಜನೆಗಳು - ಒಟ್ಟು** | **158597.62** |
| II | **ಜಿಲ್ಲಾ ವಲಯ ಯೋಜನೆಗಳ ಒಟ್ಟು (2401-00-196-1-01 & 2401-00-197-1-01)** | **21734.19** |
| II | **ಕೇಂದ್ರ ಪುರಸ್ಕೃತ ಯೋಜನೆಗಳು** | |
| 1 | ರಾಷ್ಟ್ರೀಯ ಆಹಾರ ಸುರಕ್ಷತೆ ಮಿಶನ್ (NFSM) (2401-00-102-0-08 & 2401-00-102-0-09) | 14610.76 |
| 2 | ಬಿತ್ತನೆ ಬೀಜ ಮತ್ತು ಬಿತ್ತನೆ ಸಾಮಗ್ರಿ ಉಪ ಅಭಿಯಾನ (SMSP) (2401-00-103-0-22 & 2401-00-103-0-23) | 0.00 |
| 4 | ಕೃಷಿ ವಿಸ್ತರಣೆ ಉಪ ಅಭಿಯಾನ (SMAE) (2401-00-109-0-34 & 2401-00-109-0-35) | 1697.48 |
| 5 | ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) (2401-00-113-0-02 & 2401-00-113-0-03) | 12923.32 |
| 6 | ರಾಷ್ಟ್ರೀಯ ಖಾದ್ಯತೈಲ ಅಭಿಯಾನ-ಎಣ್ಣೆಕಾಳು (NMEO-oilseeds) (2401-00-114-0-01 & 2401-00-114-0-06) | 632.08 |
| 7 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (RKVY) (2401-00-800-1-57 & 2401-00-800-1-73) | 12210.00 |
| 8 | ಮಣ್ಣಿನ ಫಲವತ್ತತೆಯ ಯೋಜನೆ (2402-00-101-0-03 & 2402-00-101-0-04) | 700.00 |
| 9 | ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ(PMFME) (2408-01-103-0-01 & 2408-01-103-0-02) | 4539.98 |
| | **ಕೇಂದ್ರ ಪುರಸ್ಕೃತ ಯೋಜನೆಗಳು - ಒಟ್ಟು** | **47313.63** |
| | **ಎಲ್ಲಾ ಯೋಜನೆಗಳ ಒಟ್ಟು** | **227645.43** |

# ಅನುಬಂಧ-3

## ಜಲಾನಯನ ಅಭಿವೃದ್ಧಿ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ವಿವಿಧ ಬಗೆಯ ಯೋಜನೆಗಳು ಮತ್ತು ಅನುದಾನ ಬಿಡುಗಡೆ ವಿವರ

**LCQ-1019** (ರೂ.ಲಕ್ಷಗಳಲ್ಲಿ )

| ಕ್ರ.ಸಂ | ಯೋಜನೆ | ಬಿಡುಗಡೆಯಾದ ಅನುದಾನ (ಜನವರಿ - 2024ರ ವರೆಗೆ) |
|---|---|---|
| 1 | ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC- PMKSY 2.0) (ಕೇಂದ್ರ ಪುರಸ್ಕೃತ ಯೋಜನೆ) (*) | 11000.00 |
| 2 | ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ (RAD) RKVY-RAFTAAR) (ಕೇಂದ್ರ ಪುರಸ್ಕೃತ ಯೋಜನೆ) (*) | 1148.61 |
| 3 | ವಿಶ್ವ ಬ್ಯಾಂಕ್ ನೆರವಿನ REWARD ಯೋಜನೆ (*) | 7500.00 |
| 4 | ನಬಾರ್ಡ್ ಆರ್.ಐ.ಡಿ.ಎಫ್ (ಟ್ರಾಂಚೆ-27) ನೆರವಿನ ಜಲಾನಯನ ಅಭಿವೃದ್ಧಿ ಯೋಜನೆಗಳು | 333.42 |
| 5 | ರೈತ ಉತ್ಪಾದಕರ ಸಂಸ್ಥೆಗಳ ಉತ್ತೇಜನ (FPOs) | 1724.98 |
| 6 | 10,000 ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನ (ಕೇಂದ್ರ ವಲಯ) | 880.64 |
| | **ಇತರೆ ಇಲಾಖೆಯ ಅನುದಾನದಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು** | |
| 7 | ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ- ಇತರೆ ಉಪಚಾರಗಳು (PMKSY-OI) | 2726.44 |
| 8 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ತಡೆಅಣೆ ನಿರ್ಮಾಣ (RKVY-CD) | 1864.61 |
| 9 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ ನಿರ್ಮಾಣ (RKVY- RPS) | 315.30 |
| 10 | ಅಟಲ್ ಭೂಜಲ್ | 424.92 |

(*) ವೆಚ್ಚದಲ್ಲಿ ಪ್ರಾರಂಭಿಕ ಶಿಲ್ಕು ಸೇರಿರುತ್ತದೆ.

LCQ - 1019 ಅನುಬಂಧ-4

**2021-22ನೇ ಹಾಗೂ 2022-23ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿರುವ ವಿವಿಧ ಯೋಜನೆ ಹಾಗೂ ಲೆಕ್ಕಶೀರ್ಷಿಕೆಗಳಡಿ ಮಂಜೂರು ಮಾಡಿದ ಹಾಗೂ ಬಿಡುಗಡೆ ಮಾಡಿದ ಅನುದಾನದ ವಿಧಾನಸಭಾ ಕ್ಷೇತ್ರವಾರು ವಿವರ (ರೂ.ಲಕ್ಷಗಳಲ್ಲಿ)**

ಜಿಲ್ಲೆ: ಬೀದರ

| ಕ್ರ.ಸಂ. | ಯೋಜನೆ | ಲೆಕ್ಕ ಶೀರ್ಷಿಕೆ | 2021-22 | | | 2022-23 | | |
|---|---|---|---|---|---|---|---|---|
| | | | ಬಿಡುಗಡೆ ಮಾಡಿರುವ ಅನುದಾನ | ವೆಚ್ಚ | ಫಲಾನುಭವಿಗಳ ಸಂಖ್ಯೆ | ಬಿಡುಗಡೆ ಮಾಡಿರುವ ಅನುದಾನ | ವೆಚ್ಚ | ಫಲಾನುಭವಿಗಳ ಸಂಖ್ಯೆ |
| | **ರಾಜ್ಯ ವಲಯ ಯೋಜನೆಗಳು** | | | | | | | |
| 1 | ಕೃಷಿ ಆಯುಕ್ತಾಲಯ | 2401-00-001-1-01 | 9.74 | 9.65 | 0 | **152.31** | **143.19** | **0** |
| 2 | ಕೃಷಿ ಭಾಗ್ಯ | 2401-00-102-0-27 | 0.00 | 0.00 | 0 | **0** | **0** | **0** |
| 3 | ರೈತರ ಪ್ರೋತ್ಸಾಹ & ಬೆಂಬಲ ಯೋಜನೆಗಳು | 2401-00-102-0-28 | 0.00 | 0.00 | 0 | **0** | **0** | 0 |
| 4 | ಕೃಷಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ | 2401-00-103-0-15 | 3521.66 | 3520.47 | 152468 | **3011.5** | **3008.47** | **163954** |
| 5 | ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಕಾರ್ಯಕ್ರಮಗಳು | 2401-00-104-0-12 | 0.00 | 0.00 | 0 | **0** | **0** | 0 |
| 6 | ಕೃಷಿ ವಿಸ್ತರಣೆ ಮತ್ತು ತರಬೇತಿ | 2401-00-109-0-21 | 81.10 | 74.12 | 0 | **8.1** | **8.05** | 0 |
| 7 | ಹೊಸ ಬೆಳೆ ವಿಮಾ ಯೋಜನೆ | 2401-00-110-0-07 | 29.72 | 27.32 | 0 | **10** | **10** | 0 |
| 8 | ಕೃಷಿ ಮೂಲಭೂತ ಸೌಕರ್ಯ | 4401-00-001-1-01 | 0.00 | 0.00 | 0 | **0** | **0** | 0 |
| | **ರಾಜ್ಯ ವಲಯ ಯೋಜನೆಗಳ ಒಟ್ಟು** | | **3642.22** | **3631.56** | **152468** | **3181.91** | **3169.71** | **163954** |
| | **ಕೇಂದ್ರ ಪುರಸ್ಕೃತ ಯೋಜನೆಗಳು** | | | | | | | |
| 1 | ರಾಷ್ಟ್ರೀಯ ಆಹಾರ ಸುರಕ್ಷತ ಮಿಶನ್ | 2401-00-102-0-08 | 402.16 | 376.46 | **57525** | **743.77** | **732.34** | 124659 |
| 2 | NMSA-ಮುಖ್ಯಮಂತ್ರಿಗಳ ಸೂಕ್ಷ್ಮ ನೀರಾವರಿ ಯೋಜನೆ | 2401-00-108-1-15 | 1355.00 | 1354.50 | 6010 | **1317.28** | **1110.82** | 8305 |
| **3** | ಕೃಷಿ ವಿಸ್ತರಣೆ ಉಪ ಅಭಿಯಾನ (SMAE) | 2401-00-109-0-34 | 58.18 | 58.18 | 4274 | **117.57** | **117.57** | 5398 |
| 4 | ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ (NMEO) | 2401-00-114-0-01 & 2401-00-114-0-06 | 0.00 | 0.00 | 2920 | **29.8** | **29.7** | 2148 |
| **5** | ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) | 2401-00-113-0-02 | 500.23 | 499.57 | 1222 | **211.61** | **208.33** | 532 |
| 6 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ | 2401-00-800-1-57 | 57.21 | 57.21 | 12628 | **25** | **25** | 8803 |
| **7** | ಮಣ್ಣಿನ ಫಲವತ್ತತೆಯ ಯೋಜನೆ | 2402-00-101-0-03 | 0.00 | 0.00 | 0 | **0** | **0** | 0 |
| | **ಕೇಂದ್ರ ಪುರಸ್ಕೃತ ಯೋಜನೆಗಳು - ಒಟ್ಟು** | | **1979.70** | **1957.71** | **84579** | **1583.69** | **1373.85** | **149845** |
| | **ಎಲ್ಲಾ ಒಟ್ಟು** | | **5621.92** | **5589.27** | **237047.00** | **4765.60** | **4543.56** | **313799.00** |

130
630

LCQ-1019 ಅನುಬಂಧ-5

| 2021-22 & 2022-23 ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿರುವ ವಿವಿಧ ಯೋಜನೆ ಹಾಗೂ ಲೆಕ್ಕಶೀರ್ಷಿಕೆಗಳಡಿ ಮಂಜೂರು ಮಾಡಿದ ಹಾಗೂ ಬಿಡುಗಡೆಯಾದ ಅನುದಾನ, ವೆಚ್ಚ ಹಾಗೂ ಫಲಾನುಭವಿಗಳ ಸಂಖ್ಯೆಯ ವಿವರ | | | | | | | | |
|---|---|---|---|---|---|---|---|---|
| ಕ್ರ. ಸಂ | ಯೋಜನೆ | ಲೆಕ್ಕಶೀರ್ಷಿಕೆ | ಕಲಬುರಗಿ ಜಿಲ್ಲೆ | | | | | |
| | | | 2021-22 | | | 2022-23 | | |
| | | | ಬಿಡುಗಡೆ | ವೆಚ್ಚ | ಫಲಾನುಭವಿಗಳ ಸಂಖ್ಯೆ | ಬಿಡುಗಡೆ | ವೆಚ್ಚ | ಫಲಾನುಭವಿಗಳ ಸಂಖ್ಯೆ |
| 1. ರಾಜ್ಯ ವಲಯ ಯೋಜನೆಗಳು | | | | | | | | |
| 1 | ಕೃಷಿ ಆಯುಕ್ತಾಲಯ | 2401-00-001-1-01 | 23.20 | 23.20 | 41 | 136.94 | 136.57 | 47 |
| 2 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ | 2401-00-001-1-75 | 128.83 | 127.82 | 305 | 60.99 | 60.94 | 91 |
| 3 | ಕೃಷಿ ಪರಿಕರಗಳು & ಗುಣಮಟ್ಟ ನಿಯಂತ್ರಣ | 2401-00-103-0-15 | 1548.19 | 1527.64 | 87873 | 2317.43 | 2311.02 | 87184 |
| 4 | ಸಾವಯವ ಕೃಷಿ ಮತ್ತು ಸಿರಿಧಾನ್ಯ | 2401-00-104-0-12 | 12.76 | 12.76 | 684 | 16.17 | 16.13 | 1055 |
| 6 | ಹೊಸ ಬೆಳೆ ವಿಮೆ ಯೋಜನೆ | 2401-00-111-0-07 | 15.32 | 15.27 | 481 | 11.93 | 11.89 | 445 |
| 7 | ಕೃಷಿ ಮೂಲಭೂತ ಸೌಕರ್ಯ | 4401-00-001-1-01 | 0.00 | 0.00 | 0 | 0.00 | 0.00 | 0 |
| ರಾಜ್ಯ ವಲಯ ಯೋಜನೆಗಳ - ಒಟ್ಟು | | | **1728.30** | **1706.69** | **89384** | **2543.46** | **2536.55** | **88822** |
| 2. ಕೇಂದ್ರ ಪುರಸ್ಕೃತ ಯೋಜನೆಗಳು | | | | | | | | |
| 1 | ರಾಷ್ಟ್ರೀಯ ಆಹಾರ ಸುರಕ್ಷತೆ ಮಿಷನ್ (NFSM) | 2401-00-102-0-08 | 1073.90 | 1061.01 | 18185 | 1197.37 | 1164.41 | 27920 |
| 2 | ರಾಷ್ಟ್ರೀಯ ಆಹಾರ ಸುರಕ್ಷತೆ ಮಿಷನ್ (NMEO) | 2401-00-102-0-08 | 0.00 | 0.00 | 0 | 26.32 | 12.80 | 1014 |
| 3 | ಕೃಷಿ ವಿಸ್ತರಣೆ ಉಪ ಅಭಿಯಾನ (ATMA) | 2401-00-109-0-34 | 51.24 | 51.24 | 267 | 127.88 | 126.43 | 1455 |
| 4 | ಕೃಷಿ ವಿಸ್ತರಣೆ ಉಪ ಅಭಿಯಾನ (SMAM) | 2401-00-113-0-02 | 847.49 | 844.49 | 3296 | 472.87 | 467.90 | 2088 |
| 5 | ಸೂಕ್ಷ್ಮ ನೀರಾವರಿ (PMKSY MI) | 2401-00-108-1-15 | 1775.79 | 1775.70 | 8141 | 1908.08 | 1905.97 | 8732 |
| 6 | RKVY | 2401-00-800-1-57 | 39.18 | 39.18 | 2755 | 52.32 | 52.28 | 1910 |
| ಕೇಂದ್ರ ಯೋಜನೆಗಳ ಒಟ್ಟು | | | **3787.60** | **3771.62** | **32644** | **3784.84** | **3729.79** | **43119** |
| ಒಟ್ಟು | | | **5515.90** | **5478.31** | **122028** | **6328.30** | **6266.34** | **131941** |

# ಅನುಬಂಧ-6

## ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ಸೌಲಭ್ಯ ಪಡೆದ ಕಲಬುರಗಿ ಮತ್ತು ಬೀದರ್ ಜಿಲ್ಲೆಯ ಫಲಾನುಭವಿಗಳ ವಿವರ

**(LCQ-1019)**

| ಕ್ರ.ಸಂ | ಯೋಜನೆ | ಸೌಲಭ್ಯಗಳು | ಕಲಬುರಗಿ ಫಲಾನುಭವಿಗಳ ಸಂಖ್ಯೆ | | ಬೀದರ್ ಫಲಾನುಭವಿಗಳ ಸಂಖ್ಯೆ | |
|---|---|---|---|---|---|---|
| | | | 2021-22 | 2022-23 | 2021-22 | 2022-23 |
| 1 | ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ - ಜಲಾನಯನ ಅಭಿವೃದ್ಧಿ ಘಟಕ 1.0 (PMKSY-WDC1.0) | ತಡೆಅಣೆ | 3 | 0 | 0 | 0 |
| | | ಖುಷ್ಕಿ ತೋಟಗಾರಿಕೆ | 8 | 0 | 0 | 0 |
| 2 | ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ 2.0 (WDC-PMKSY 2.0) | ಕೇತ್ರಬದು | 0 | 2115 | 75 | 985 |
| | | ತಡೆಅಣೆ | 9 | 63 | 0 | 98 |
| | | ನಾಲಾ ಬದು | 0 | 0 | 3 | 11 |
| | | ಕೃಷಿ ಹೊಂಡ | 0 | 0 | 0 | 15 |
| | | ಬೋಲ್ಡರ್ ಚೆಕ್ | 0 | 0 | 0 | 622 |
| | | ಗೋಕಟ್ಟೆ | 0 | 24 | 0 | 12 |
| | | ಕೃಷಿ ಅರಣ್ಯ | 0 | 203 | 0 | 0 |
| | | ಖುಷ್ಕಿ ತೋಟಗಾರಿಕೆ | 0 | 64 | 0 | 0 |
| | | ತರಕಾರಿ ಕಿರುಚೀಲ | 738 | 418 | 0 | 0 |
| | | ಜಾನುವಾರು ಆಧಾರಿತ ಸಮಗ್ರ ಕೃಷಿ ಪದ್ಧತಿ | 0 | 179 | 0 | 0 |
| | | ಮೆಕ್ಕೆ ಜೋಳದ ಮೇವು ಬೀಜದ ಕಿರುಚೀಲ | 0 | 1821 | 0 | 2000 |
| | | ಮೇವು ಕತ್ತರಿಸುವ ಯಂತ್ರ | 0 | 103 | 0 | 98 |
| | | ಹಾಲು ಕರಿಯುವ ಯಂತ್ರ | 0 | 0 | 0 | 10 |
| | | ಹಸು ನೆಲ ಹಾಸಿಗೆ | 0 | 126 | 0 | 150 |
| 3 | ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು (PMKSY-OI) | ತಡೆಅಣೆ | 138 | 66 | 96 | 79 |
| | | ಗೋಕಟ್ಟೆ | 0 | 12 | 0 | 0 |
| | | ಕೃಷಿಹೊಂಡ | 0 | 32 | 0 | 9 |
| | | ಬೋರವೆಲ್ ನಿರ್ಮಾಣ | 0 | 1 | 0 | 0 |
| 4 | ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ-(RAD-RKVY-RAFTAAR) | ಜಾನುವಾರ ಆಧಾರಿತ ಸಮಗ್ರ ಕೃಷಿ ಪದ್ಧತಿ (ಹಸು/ಎಮ್ಮೆ) | 37 | 7 | 0 | 0 |
| | | ಜಾನುವಾರ ಆಧಾರಿತ ಸಮಗ್ರ ಕೃಷಿ ಪದ್ಧತಿ (ಕುರಿ/ಮೇಕೆ) | 80 | 9 | 140 | 34 |
| | | ಎರೆಹುಳು ತೋಟ್ಟಿ | 19 | 3 | 0 | 0 |
| | | ಕೃಷಿ ಅರಣ್ಯ | 25 | 0 | 0 | 0 |
| | | ಖುಷ್ಕಿ ತೋಟಗಾರಿಕೆ | 88 | 0 | 0 | 0 |
| 5 | ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ (WDPD) | ತಡೆಅಣೆ | 300 | 54 | 0 | 62 |
| | | ಕೇತ್ರಬದು | 0 | 0 | 161 | 0 |
| | | ಗೋಕಟ್ಟೆ | 8 | 60 | 0 | 0 |
| | | ಕೃಷಿ ಅರಣ್ಯ | 293 | 0 | 0 | 0 |
| | | ಖುಷ್ಕಿ ತೋಟಗಾರಿಕೆ | 38 | 40 | 105 | 97 |
| | | ತರಕಾರಿ ಕಿರುಚೀಲ | 0 | 700 | 0 | 0 |
| 6 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ - ತಡೆ ಅಣೆ ನಿರ್ಮಾಣ (RKVY-CD) | ತಡೆಅಣೆ | 36 | 45 | 38 | 60 |
| 7 | REWARD | ಗೋಕಟ್ಟೆ | 0 | 8 | 0 | 0 |

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1019 |
| ಸದಸ್ಯರ ಹೆಸರು | : | ಡಾ:ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 23-02-2024 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ವಿವಿಧ ಬಗೆಯ ಯೋಜನೆಗಳು ಯಾವುವು; (ವಿವರ ಒದಗಿಸುವುದು); | ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ವಿವಿಧ ಬಗೆಯ ಯೋಜನೆಗಳ ವಿವರಗಳನ್ನು ಅನುಬಂಧ-1ರಲ್ಲಿ ಹಾಗೂ ಅನುದಾನದ ಮಾಹಿತಿಯನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ.<br>ರಾಜ್ಯದಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ರೈತರಿಗೆ ನೀಡುತ್ತಿರುವ ವಿವಿಧ ಬಗೆಯ ಯೋಜನೆಗಳು ಹಾಗೂ ಸದರಿ ಯೋಜನೆಗಳಿಗೆ ಬಿಡುಗಡೆಯಾದ ಅನುದಾನದ ಮಾಹಿತಿಯನ್ನು ಅನುಬಂಧ-3 ರಲ್ಲಿ ಒದಗಿಸಲಾಗಿದೆ. |
| ಆ. | ಸದರಿ ಯೋಜನೆಗಳಿಗೆ ಕೃಷಿ ಇಲಾಖೆಯಿಂದ ಬಿಡುಗಡೆಯಾದ ಅನುದಾನವೆಷ್ಟು; (ಮಾಹಿತಿ ಒದಗಿಸುವುದು) | |
| ಇ | ಕಳೆದ 2 ವರ್ಷಗಳಲ್ಲಿ ಎಷ್ಟು ಕೃಷಿಕರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಂಡಿದ್ದಾರೆ; ಅಂಕಿ ಸಮೇತ ಬೀದರ್ & ಕಲಬುರಗಿ ಜಿಲ್ಲೆಯ ಮಾಹಿತಿ ಒದಗಿಸುವುದು? | ಕಳೆದ 2 ವರ್ಷಗಳಲ್ಲಿ ಕೃಷಿ ಇಲಾಖೆಯಿಂದ ಸೌಲಭ್ಯಗಳನ್ನು ಪಡೆದುಕೊಂಡ ರೈತರ ಅಂಕಿ ಸಹಿತ ಬೀದರ್ ಜಿಲ್ಲೆಯ ಮಾಹಿತಿಯನ್ನು ಅನುಬಂಧ-4ರಲ್ಲಿ ಮತ್ತು ಕಲಬುರಗಿ ಜಿಲ್ಲೆಯ ಮಾಹಿತಿಯನ್ನು ಅನುಬಂಧ-5ರಲ್ಲಿ ಒದಗಿಸಲಾಗಿದೆ.<br><br>ಕಳೆದ ಎರಡು ವರ್ಷಗಳಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳಡಿ ಬೀದರ್ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಸೌಲಭ್ಯಗಳನ್ನು ಪಡೆದುಕೊಂಡ ಫಲಾನುಭವಿಗಳ ವಿವರವನ್ನು ಅನುಬಂಧ-6ರಲ್ಲಿ ಒದಗಿಸಲಾಗಿದೆ. |

**ಸಂಖ್ಯೆ: AGRI/33/AML/2024**

**(ಎನ್. ಚೆಲುವರಾಯಸ್ವಾಮಿ)**
**ಕೃಷಿ ಸಚಿವರು.**

**LCQ-1019**

**ಅನುಬಂಧ-1**

# ರಾಜ್ಯದಲ್ಲಿ ಕೃಷಿ ಇಲಾಖೆಯ ವತಿಯಿಂದ ರೈತರಿಗಾಗಿ ಇರುವ ವಿವಿಧ ಯೋಜನೆಗಳು ಹಾಗೂ ಯೋಜನೆಗಳ ವಿವರ

1. **ಬೀಜಗಳ ಪೂರೈಕೆ:** ಕೃಷಿ ಇಲಾಖೆಯ ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ವಿವಿಧ ಕೃಷಿ ಬೆಳೆಗಳ (ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ) ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ. ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ. ಬಿತ್ತನೆ ಬೀಜ ವಿತರಣೆಯಲ್ಲಿ ರೈತರ ಪಹಣಿಯಲ್ಲಿನ ವಿವರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುತ್ತದೆ. ಪರಿಶಿಷ್ಟ ವರ್ಗ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ರೈತರು ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗುತ್ತದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು.

2. **ಸಸ್ಯ ಸಂರಕ್ಷಣೆ:** ಶೇ.50ರ ಸಹಾಯಧನದಡಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ, ಬೀಜೋಪಚಾರ ಆಂದೋಲನ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ತರಬೇತಿಗಾಗಿ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು.

3. **ಕೃಷಿ ಯಾಂತ್ರೀಕರಣ & ಕೃಷಿ ಸಂಸ್ಕರಣೆ:**

   *ಕೃಷಿ ಯಾಂತ್ರೀಕರಣ:* ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಈ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

   *ಕೃಷಿ ಸಂಸ್ಕರಣೆ:* ಈ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ

ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನದಡಿ ನೀಡಲಾಗುವುದು. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ.

ಇದಕ್ಕಾಗಿ Farmer Registration and Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಆರ್.ಟಿ.ಸಿ. ಯೊಂದಿಗೆ ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು ಹಾಗೂ ಕೆ-ಕಿಸಾನ್ ತಂತ್ರಾಂಶದಲ್ಲಿ ಅರ್ಜಿಯನ್ನು ಅಪ್‌ಲೋಡ್ ಮಾಡಬೇಕಾಗುತ್ತದೆ. ಅರ್ಜಿ ಸಲ್ಲಿಸಿದ ಎಲ್ಲಾ ಅರ್ಹ ರೈತರಿಗೆ ಜೇಷ್ಠತೆ ಹಾಗೂ ಅನುದಾನ ಲಭ್ಯತೆಯ ಆಧಾರದ ಮೇರೆಗೆ ಮಾರ್ಗಸೂಚಿ ಅನ್ವಯ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. ರಾಜ್ಯದ ಎಲ್ಲಾ ರೈತರಿಗೂ ಯಂತ್ರೋಪಕರಣ/ಕೃಷಿ ಸಂಸ್ಕರಣಾ ಘಟಕಗಳ ಯೋಜನೆಯ ಸೌಲಭ್ಯ ನೀಡುವ ದೃಷ್ಟಿಯಿಂದ, ಒಮ್ಮೆ ಕೃಷಿ ಯಂತ್ರೋಪಕರಣ/ಕೃಷಿ ಸಂಸ್ಕರಣಾ ಘಟಕಗಳ ಸೌಲಭ್ಯ ಪಡೆದ ರೈತರು 7 ವರ್ಷಗಳ ನಂತರ ಮತ್ತು ಕೃಷಿ ಸಂಸ್ಕರಣಾ ಕಾರ್ಯಕ್ರಮದಡಿ ಟಾರ್ಪಲಿನ್ ಸೌಲಭ್ಯ ಪಡೆದ ರೈತರು 3 ವರ್ಷಗಳ ನಂತರ ಮತ್ತೆ ಸದರಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

4. **ರೈತ ಸಿರಿ & ಸಾವಯವ ಕೃಷಿ:** ಸಾವಯವ ಕೃಷಿ ಅಳವಡಿಕೆ ಮತ್ತು ದೃಢೀಕರಣ ಕಾರ್ಯಕ್ರಮದಡಿ ರಾಜ್ಯದ ಸಾವಯವ ಪ್ರಮಾಣೀಕೃತ ಪ್ರದೇಶವನ್ನು ವಿಸ್ತರಿಸುವ ನಿಟ್ಟಿನಲ್ಲಿ ಆಸಕ್ತ ಗುಂಪು ಮತ್ತು ವ್ಯಕ್ತಿಗತ ಪ್ರಸ್ತಾವನೆಗಳ ಪ್ರಮಾಣೀಕರಣಕ್ಕಾಗಿ ಅನುದಾನ ಬಳಕೆ ಮಾಡಲಾಗುತ್ತದೆ.
   ರೈತ ಸಿರಿ ಕಾರ್ಯಕ್ರಮದಡಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಬೆಳೆ ಸಮೀಕ್ಷೆ ಆಧಾರದಂತೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು ಹಾಗೂ ಸಾವಯವ ಮತ್ತು ಸಿರಿಧಾನ್ಯಗಳ ಉತ್ತೇಜನ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

5. **ಸಾವಯವ ಇಂಗಾಲ ಅಭಿಯಾನ:** ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣವನ್ನು ಹೆಚ್ಚಿಸಲು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ಶೇ. 75ರ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುವುದು ಹಾಗೂ ಹಸಿರೆಲೆ ಗೊಬ್ಬರ ಬೀಜ ಮತ್ತು ಸಾವಯವ ಗೊಬ್ಬರಗಳ ಬಳಕೆಯಿಂದ ಸಾವಯವ ಇಂಗಾಲ ಹೆಚ್ಚಿಸುವ ಕುರಿತು ಪ್ರಾತ್ಯಕ್ಷಿಕೆಗಳನ್ನು (ಪ್ರತಿ ಪ್ರಾತ್ಯಕ್ಷಿಕೆಗೆ ರೂ. 2500/-) ಆಯೋಜಿಸಲಾಗುತ್ತಿದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು.

6. **ಹೊಸ ಬೆಳೆ ವಿಮಾ ಯೋಜನೆ:** ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುತ್ತಿದೆ.

   ಈ ಯೋಜನೆಯಡಿ ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಾಗೂ ಇತರೆ ಬೆಳೆಗಳನ್ನು ಹೋಬಳಿ ಮಟ್ಟದಲ್ಲಿ ಪ್ರಥಮವಾಗಿ ಅಧಿಸೂಚಿಸಲಾಗುತ್ತದೆ. ಅಂತಿಮ ದಿನಾಂಕದೊಳಗೆ ರೈತರಿಂದ ಪ್ರೀಮಿಯಂ ಪಡೆದು ಬ್ಯಾಂಕ್ / ಸಹಕಾರ ಸಂಸ್ಥೆ / ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಬೆಳೆ ವಿಮೆ ನೋಂದಣಿ ಕಾರ್ಯ ಕೈಗೊಳ್ಳಲಾಗುತ್ತದೆ ದಾಖಲೆಗಳನ್ನು ಪರಿಶೀಲಿಸಿ ಅರ್ಹ ರೈತರ ಪ್ರಸ್ತಾವನೆಗಳನ್ನು ಸಂಬಂಧಿಸಿದ ವಿಮಾ ಸಂಸ್ಥೆಗಳಿಗೆ ಅಂಗೀಕರಿಸಲು ರವಾನಿಸಲಾಗುತ್ತದೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯು ಕ್ಷೇತ್ರಾಧಾರಿತ ಹಾಗೂ ಇಳುವರಿ ಆಧಾರಿತ ಯೋಜನೆಯಾಗಿದ್ದು, ಮಾರ್ಗಸೂಚಿಯನುಸಾರ ಹೋಬಳಿ / ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯವರು ನೀಡುವ ಬೆಳೆ ಕಟಾವು ಪ್ರಯೋಗಗಳಿಂದ ಬಂದಂತಹ ವಾಸ್ತವಿಕ ಇಳುವರಿ ಮಾಹಿತಿಯು ನಿಗದಿಪಡಿಸಲಾದ ಪ್ರಾರಂಭಿಕ ಇಳುವರಿಗಿಂತ ಕಡಿಮೆ ಇದ್ದರೆ, ಇಳುವರಿಯ ಕೊರತೆಗನುಗುಣವಾಗಿ ಹೋಬಳಿ/ ಗ್ರಾಮ ಪಂಚಾಯಿತಿಯಲ್ಲಿ ಬೆಳೆ ವಿಮೆ ಮಾಡಿಸಿದ ಎಲ್ಲಾ ರೈತರು ಬೆಳೆ ವಿಮಾ ನಷ್ಟ ಪರಿಹಾರ ಪಡೆಯಲು ಅರ್ಹರಾಗುತ್ತಾರೆ. ಅರ್ಹ ರೈತರಿಗೆ ವಿಮೆ ಪರಿಹಾರ ಮೊತ್ತವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ವಿಮಾ ಸಂಸ್ಥೆಯವರು ವರ್ಗಾಯಿಸುತ್ತಾರೆ.

7. **ಬೆಳೆ ಸಮೀಕ್ಷೆ:** ಪೂರ್ವ ಮುಂಗಾರು, ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮುಗಳಲ್ಲಿ ಬೆಳೆ ಸಮೀಕ್ಷೆ ಕೈಗೊಂಡ ಖಾಸಗಿ ನಿವಾಸಿಗಳಿಗೆ ಕೇಂದ್ರೀಕೃತ DBT k2 ಮೂಲಕ ಆಧಾರ್ ಆಧಾರಿತ ನೇರ ಗೌರವಧನ ಪಾವತಿ, ಮಾಸ್ಟರ್ ತರಬೇತುದಾರರು ಹಾಗೂ ಜಿಲ್ಲಾ ತಾಂತ್ರಿಕ ಸಲಹೆಗಾರರ ಗೌರವಧನ, ಬೆಳೆ ಸಮೀಕ್ಷೆ ಕುರಿತು ತರಬೇತಿ, ಕಾರ್ಯಾಗಾರ ಆಯೋಜನೆ, ವಿವಿಧ ಮಾಧ್ಯಮಗಳ ಮೂಲಕ ಜಾಹೀರಾತು, ಮುದ್ರಣ, ಸಿ.ಡಿ. ದಾಖಲಾತಿ, ವಿದ್ಯುನ್ಮಾನ ಮತ್ತು ವಿವಿಧ ಮಾಧ್ಯಮಗಳ ಮುಖಾಂತರ ಪ್ರಚಾರಕ್ಕಾಗಿ ತಗಲುವ ವೆಚ್ಚ, ಹೆಲ್ಪ್ ಡೆಸ್ಕ್ ಸಿಬ್ಬಂದಿ ವೇತನ ಹಾಗೂ ತಂತ್ರಾಂಶ ನಿರ್ವಹಣೆ ವೆಚ್ಚ, ಶೇ. 1ರಷ್ಟು ದತ್ತಾಂಶದ ಪರಿಶೀಲನೆ ಕೈಗೊಳ್ಳುವ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ ಸಿಬ್ಬಂದಿಗಳಿಗೆ ಗೌರವಧನ, ಬೆಳೆ ಸಮೀಕ್ಷೆ ಕಾರ್ಯತಂಡ ನಿರ್ವಹಣೆ, ಇತರೆ ಕಛೇರಿ ಮತ್ತು ಆಡಳಿತಾತ್ಮಕ ವೆಚ್ಚಕ್ಕಾಗಿ ಉಪಯೋಗಿಸಲಾಗುತ್ತದೆ. ಪಹಣಿ ಹೊಂದಿರುವ ಎಲ್ಲಾ ಹಿಡುವಳಿದಾರರು ಅರ್ಹರಿರುತ್ತಾರೆ.

8. **ಮುಖ್ಯಮಂತ್ರಿಗಳ ರೈತ ವಿದ್ಯಾನಿಧಿ:** ಎಸ್.ಎಸ್.ಎಲ್.ಸಿ/ 10ನೇ ತರಗತಿಯನ್ನು ಪೂರೈಸಿರುವ ಹಾಗೂ ರಾಜ್ಯದ ಯಾವುದೇ ಭಾಗದಲ್ಲಿ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಹಾಗೂ ಪ್ರೌಢಶಾಲಾ ಶಿಕ್ಷಣ ಪಡೆಯುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳಿಗೆ ಹಾಗೂ ಭೂರಹಿತ ಕೃಷಿ

ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ.

ಸದರಿ ಯೋಜನೆಯಡಿ:-

- 8, 9 ಮತ್ತು 10 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳು ಮತ್ತು ಎಸ್.ಎಸ್.ಎಲ್.ಸಿ /10ನೇ ತರಗತಿಯನ್ನು ಪೂರೈಸಿರುವ ಹಾಗೂ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್-ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಮಕ್ಕಳು ಈ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.

- ರೈತ ಕುಟುಂಬದ ಎಲ್ಲಾ ಮಕ್ಕಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ರೈತ ಎಂದರೆ ರಾಜ್ಯದ ಯಾವುದೇ ಭಾಗದಲ್ಲಿ ಉಳುಮೆ ಮಾಡುವಂತಹ/ ಕೃಷಿ ಮಾಡುವಂತಹ ಜಮೀನನ್ನು ತನ್ನ ಹೆಸರಿನಲ್ಲಿ ಹೊಂದಿರುವಂತಹ ವ್ಯಕ್ತಿ (ಕೃಷಿ ಇಲಾಖೆಯ FRUITS ತಂತ್ರಾಂಶದಲ್ಲಿ ಭೂಸಹಿತ FID ಸಂಖ್ಯೆ ಹೊಂದಿರಬೇಕು). ಕೃಷಿ ಕಾರ್ಮಿಕರು ಎಂದರೆ ಕೃಷಿ ಇಲಾಖೆಯ FRUITS ತಂತ್ರಾಂಶದಲ್ಲಿ ಭೂರಹಿತ FID ಸಂಖ್ಯೆ ಹೊಂದಿದ್ದು MGNREGA ಉದ್ಯೋಗ ಚೀಟಿ ಹೊಂದಿರಬೇಕು. ರೈತ ಕುಟುಂಬ ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರು.

- ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ ಇತರೆ ಯಾವುದೇ ಇಲಾಖೆಯು ನೀಡುವ ವಿದ್ಯಾರ್ಥಿ ವೇತನ ಪಡೆಯುತ್ತಿರುವ ವಿದ್ಯಾರ್ಥಿಗಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವುದಿಲ್ಲ.

## 9. ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ ಪ್ರಶಸ್ತಿ:

ಕೃಷಿ ಪಂಡಿತ ಪ್ರಶಸ್ತಿ: ಕೃಷಿ ಕ್ಷೇತ್ರದಲ್ಲಿ ವಿನೂತನ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಿಂದ ಗಮನಾರ್ಹ ಸಾಧನೆ ಮಾಡಿರುವ ಮತ್ತು ರೈತ ಸಮುದಾಯದ ಅಭಿವೃದ್ಧಿಗಾಗಿ ಕೊಡುಗೆ ನೀಡುತ್ತಿರುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪಂಡಿತ ಪ್ರಶಸ್ತಿ ನೀಡಲಾಗುತ್ತಿದೆ. ಈ ಹಿಂದೆ ಕೃಷಿ ಪಂಡಿತ ಪ್ರಶಸ್ತಿ(ಪ್ರಥಮ/ದ್ವಿತೀಯ/ತೃತೀಯ/ಉದಯೋನ್ಮುಖ) ಪಡೆದವರು ಹೊರತುಪಡಿಸಿ ಉಳಿದೆಲ್ಲಾ ರೈತ ಮತ್ತು ರೈತ ಮಹಿಳೆಯರು ಕೃಷಿ ಪಂಡಿತ ಪ್ರಶಸ್ತಿಗೆ ಸ್ಪರ್ಧಿಸಬಹುದಾಗಿರುತ್ತದೆ.

ಕೃಷಿ ಪ್ರಶಸ್ತಿ : ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸಲು ರೈತರಲ್ಲಿ ಆರೋಗ್ಯಕರ ಸ್ಪರ್ಧಾ ಮನೋಭಾವನೆಯನ್ನು ಉಂಟು ಮಾಡಿ ಅತಿ ಹೆಚ್ಚು ಇಳುವರಿ ಪಡೆಯುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪ್ರಶಸಿಯನ್ನು ನೀಡಲಾಗುತ್ತಿದೆ. ಕಳೆದ ಐದು ವರ್ಷಗಳಲ್ಲಿ ಬೆಳೆ ಸ್ಪರ್ಧೆಯಡಿ ವಿಜೇತರಾದವರನ್ನು ಹೊರತುಪಡಿಸಿ ಉಳಿದೆಲ್ಲಾ ರೈತರು ಕೃಷಿ ಪ್ರಶಸ್ತಿಗೆ ಸ್ಪರ್ಧಿಸಬಹುದಾಗಿರುತ್ತದೆ.

**10.ತರಬೇತಿ ಕಾರ್ಯಕ್ರಮಗಳು:** ಈ ಯೋಜನೆಯಡಿ ಕೃಷಿ ವಿಸ್ತರಣಾ ಅಧಿಕಾರಿಗಳ ನಿರ್ವಹಣಾ ಸಾಮರ್ಥ್ಯ ಮತ್ತು ರೈತರ/ ರೈತ ಮಹಿಳೆಯರ ವೃತ್ತಿ ಸಾಮರ್ಥ್ಯವನ್ನು ಹೆಚ್ಚಿಸಲು ಕೃಷಿ ತಾಂತ್ರಿಕತೆಗಳಿಗೆ ಸಂಬಂಧಿಸಿದಂತೆ ವಿಶೇಷ ತರಬೇತಿಗಳನ್ನು ಹಾಗೂ ಅಧ್ಯಯನ ಪ್ರವಾಸಗಳನ್ನು ಆಯೋಜಿಸಲಾಗುತ್ತದೆ.

**11.ಕೃಷಿ ಭಾಗ್ಯ:** ಮಳೆಯಾಶ್ರಿತ ಕೃಷಿ ನೀತಿ, 2014 ರನ್ವಯ 2023-24 ನೇ ಸಾಲಿನಲ್ಲಿ ರಾಜ್ಯದ 5 ಒಣ ಹವಾಮಾನ ವಲಯಗಳ 24 ಬರ ಪೀಡಿತ ಜಿಲ್ಲೆಗಳಲ್ಲಿನ 106 ತಾಲ್ಲೂಕುಗಳಲ್ಲಿ ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುವುದು. ರಾಜ್ಯದ ಮಳೆಯಾಶ್ರಿತ ಕೃಷಿಯನ್ನು ಸುಸ್ಥಿರ ಕೃಷಿಯನ್ನಾಗಿ ರೂಪಾಂತರಗೊಳಿಸುವುದು, ಸಮರ್ಪಕ ಮಳೆ ನೀರಿನ ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆ ಪದ್ಧತಿಯಿಂದ ಕೃಷಿ ಉತ್ಪಾದಕತೆಯನ್ನು ಉತ್ತಮ ಪಡಿಸುವುದು ಮತ್ತು ಆದಾಯವನ್ನು ಹೆಚ್ಚಿಸುವುದು. ಮಳೆ ನೀರನ್ನು ವ್ಯರ್ಥ ಮಾಡದೆ ಆಯ್ದ ಸ್ಥಳದಲ್ಲಿ ಕೃಷಿ ಹೊಂಡ ತೆಗೆದು ಜಲ ಸಂಗ್ರಹಿಸಿ, ಬೆಳೆಗಳ ಸಂದಿಗ್ಧ ಹಂತಗಳಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ (GI Wire Stone Fencing), ಹೊಂಡದಿಂದ ನೀರು ಎತ್ತಲು ಡೀಸೆಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್, ನೀರನ್ನು ಬೆಳೆಗೆ ಹಾಯಿಸಲು ಸೂಕ್ಷ್ಮ(ತುಂತುರು/ಹನಿ) ನೀರಾವರಿ ಘಟಕಗಳನ್ನು ಒದಗಿಸಲು ಯೋಜಿಸಲಾಗುತ್ತಿದೆ.

**ಫಲಾನುಭವಿಯ ಆಯ್ಕೆ ಮಾನದಂಡಗಳು:**

- ಕ್ಷೇತ್ರ ಪರಿಶೀಲನೆಯಲ್ಲಿ ಅರ್ಹಗೊಂಡ ರಾಜ್ಯದ 5 ಕೃಷಿ ಹವಾಮಾನ ಒಣ ವಲಯದ (ಅಚ್ಚು ಕಟ್ಟು ಪ್ರದೇಶ ಹೊರತುಪಡಿಸಿ) ಎಲ್ಲಾ ಆಸಕ್ತ ರೈತರು ಯೋಜನೆಗೆ ಅರ್ಹರಾಗಿರುತ್ತಾರೆ.
- ರೈತರ ಒಟ್ಟು ಸಾಗುವಳಿ ಕ್ಷೇತ್ರದ ಒಂದು ಸರ್ವೆ ನಂಬರ್ ನಲ್ಲಿ ಕನಿಷ್ಠ 1 ಎಕರೆ ಇರಬೇಕು (single land parcel).
- ಕೃಷಿ ಭಾಗ್ಯ ಯೋಜನೆಯ ಪೂರ್ಣ ಪ್ಯಾಕೇಜ್‌ನ ಘಟಕಗಳನ್ನು ಅನುಷ್ಠಾನಗೊಳಿಸಲು ಆಸಕ್ತಿಯಿರುವಂತಹ ರೈತರನ್ನು ಮಾತ್ರ ಆಯ್ಕೆ ಮಾಡಿ ಕ್ಷೇತ್ರ ಪರಿಶೀಲನೆ ಕೈಗೊಳ್ಳಲಾಗುವುದು.
- ಹಿಂದಿನ ಸಾಲುಗಳಲ್ಲಿ ಕೃಷಿ ಭಾಗ್ಯ ಯೋಜನೆ ಅಥವ ಇನ್ಯಾವುದೇ ಯೋಜನೆಯಡಿ ಕೃಷಿ ಹೊಂಡ ಫಲಾನುಭವಿಯಾಗಿರುವ ರೈತರು ಸದರಿ ಯೋಜನೆಗೆ ಅರ್ಹತೆ ಹೊಂದಿರುವುದಿಲ್ಲ
- ಪರಿಶಿಷ್ಠ ಜಾತಿ/ಪ.ಪಂಗಡ ರೈತರು ಸರ್ಕಾರದ ನಿರ್ದಿಷ್ಟ ಅನುಪಾತದನ್ವಯ ಅರ್ಹರಾಗಿರುತ್ತಾರೆ.

**12.ಹೈಟೆಕ್ ಹಾರ್ವೆಸ್ಟರ್ ಹಬ್**- ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಹಂತ ಹಂತವಾಗಿ ಸ್ಥಾಪಿಸಲು ರಾಜ್ಯದಲ್ಲಿ ಪ್ರಚಲಿತವಿರುವ ಕೃಷಿ ಯಂತ್ರಧಾರೆ ಕೇಂದ್ರಗಳು / ರೈತ ಉತ್ಪಾದಕ ಸಂಸ್ಥೆಗಳು / ಸೇವಾದಾರ ಸಂಸ್ಥೆಗಳು / ವೈಯಕ್ತಿಕ ಫಲಾನುಭವಿಗಳನ್ನು ಒಳಗೊಂಡಂತೆ ಅರ್ಹತೆಯಿರುವ ಸಂಸ್ಥೆಗಳನ್ನು / ವೈಯಕ್ತಿಕ ಫಲಾನುಭವಿಗಳನ್ನು ಆಯ್ಕೆ ಮಾಡಿ ಅವಶ್ಯಕತೆಯಿರುವ ಪ್ರದೇಶಗಳಲ್ಲಿ Hi-Tech Harvester Hubs ಗಳನ್ನು ಸ್ಥಾಪಿಸಲಾಗುವುದು. ಸದರಿ ಕೇಂದ್ರಗಳಲ್ಲಿ ದಾಸ್ತಾನೀಕರಿಸುವ Hi-Tech ಕಟಾವು /

ಒಕ್ಕಣೆ ಯಂತ್ರಗಳಿಗೆ ಸಮನ್ಯ ವರ್ಗದ ರೈತರಿಗೆ ಗರಿಷ್ಠ ಶೇ.50 ರಂತೆ , ಪ.ಜ ./ಪ.ಪಂ. ವರ್ಗದ ರೈತರಿಗೆ ಗರಿಷ್ಠ ಶೇ.70 ರಂತೆ ಹಾಗೂ ಸಂಘ-ಸಂಸ್ಥೆಗಳಿಗೆ (ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆ / FPO ಗಳ ನ್ನೊಳಗೊಂಡಂತೆ) ಗರಿಷ್ಠ ಶೇ.70 ರಂತೆ ಸಹಾಯಧನವನ್ನು ಒದಗಿಸಲಾಗುವುದು. ಸದರಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುವುದು. ಪ್ರತಿ ಕೇಂದ್ರಕ್ಕೆ ಒಮ್ಮೆ ಮಾತ್ರ ಆಡಳಿತಾತ್ಮಕ ವೆಚ್ಚವಾಗಿ ರೂ.5.00 ಲಕ್ಷಗಳನ್ನು ಒದಗಿಸಲಾಗುತ್ತದೆ.

**13.ಕೃಷಿ ನವೋದ್ಯಮ:** ಕೃಷಿ ಕ್ಷೇತ್ರದಲ್ಲಿ ಉದ್ಯಮಶೀಲತೆಯನ್ನು ಹೆಚ್ಚಿಸಲು ಹಾಗೂ ಗ್ರಾಮೀಣ ಭಾಗದ ಯುವಕರಿಗೆ ಉದ್ಯೋಗ ಸೃಜನೆಗಾಗಿ ಕೃಷಿಯಲ್ಲಿನ ನೂತನ ತಾಂತ್ರಿಕತೆಗಳು ಹಾಗೂ ನವೀನ ಪರಿಕಲ್ಪನೆಗಳ ವಾಣಿಜ್ಯೀಕರಣವನ್ನು ಉತ್ತೇಜಿಸುವ ಗುರಿಯೊಂದಿಗೆ ಕೃಷಿ ನವ್ಯೋದ್ಯಮ ಕಾರ್ಯಕ್ರಮವನ್ನು 2023-24ನೇ ಸಾಲಿನಲ್ಲಿ ಅನುಷ್ಠಾನ ಮಾಡಲಾಗುತ್ತದೆ. ಈ ಯೋಜನೆಯು 3 ಪ್ರಮುಖ ಘಟಕಗಳನ್ನು ಒಳಗೊಂಡಿರುತ್ತದೆ:

- ಹೊಸ ಕೃಷಿ ನವೋದ್ಯಮಗಳಿಗೆ (Startups at Incubation Stage) ಆರ್ಥಿಕ ನೆರವು: ಹೊಸ ಕೃಷಿ ನವೋದ್ಯಮಿಗಳಿಗೆ ಅನುಮೋದಿತ ಯೋಜನಾ ವರದಿಯ ಶೇಕಡ 50 ರಷ್ಟು ಸಹಾಯಧನವನ್ನು (ಕನಿಷ್ಟ-ರೂ. 5.00 ಲಕ್ಷದಿಂದ ಗರಿಷ್ಟ ರೂ. 20 ಲಕ್ಷಗಳವರೆಗೆ) ಬ್ಯಾಂಕ್ ಸಾಲದ ಮುಖಾಂತರ (Backended subsidy) ನೀಡಲಾಗುತ್ತದೆ.
- ಈಗಾಗಲೇ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆ ಅಥವಾ ಮೇಲ್ದರ್ಜೆಗೇರಿಸಲು (Scale up of business/Expansion of established Startups) ಆರ್ಥಿಕ ನೆರವು: ಈಗಾಗಲೇ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆಗಾಗಿ ಹಾಗೂ ಉನ್ನತೀಕರಣಕ್ಕಾಗಿ ಯೋಜನಾ ವರದಿಯ ಶೇಕಡ 50 ರಷ್ಟು ಸಹಾಯಧನವನ್ನು (ಕನಿಷ್ಟ-ರೂ. 20 ಲಕ್ಷದಿಂದ ಗರಿಷ್ಟ ರೂ. 50 ಲಕ್ಷಗಳವರೆಗೆ) ಕೃಷಿ ವಲಯದ ನವೋದ್ಯಮಿಗಳಿಗೆ ಬ್ಯಾಂಕ್ ಸಾಲದ ಮುಖಾಂತರ (Backended subsidy) ನೀಡಲಾಗುತ್ತದೆ.
- ಕೃಷಿ ನವೋದ್ಯಮಗಳ ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮ (Mentoring and Acceleration Programme –MAP): ಆಯ್ಕೆಯಾದ ನವೋದ್ಯಮಿಗಳ ಸಾಮರ್ಥ್ಯಾಭಿವೃದ್ಧಿಗೆ ಕೃಷಿ ವಿಶ್ವವಿದ್ಯಾಲಯ, ICAR, CFTRI, CSIR, C-CAMP, ಹಾಗೂ ಇತರೆ ಸಂಶೋದನಾ ಸಂಸ್ಥೆಗಳಿಂದ ತರಬೇತಿಗಳನ್ನು ನೀಡಲಾಗುತ್ತದೆ.

ಅರ್ಹತೆ:

- Agri- Startup ನೋಂದಣಿ: ಅರ್ಜಿ ಸಲ್ಲಿಸುವ Agri- Startup ಗಳು Private Limited company (Companies Act, 2013) ಅಥವಾ Partnership Firm (registered under section 59 of the Partnership Act, 1932) ಅಥವಾ Limited Liability Partnership (the Limited Liability Partnership Act, 2008) ನಡಿ ಕಡ್ಡಾಯವಾಗಿ ಕರ್ನಾಟಕದಲ್ಲಿ ನೋಂದಣಿಯಾಗಿರಬೇಕು.
- ವ್ಯವಹಾರ ಗಳಿಕೆ (Turnover) : ನೋಂದಣಿಯಿಂದ ಇಲ್ಲಿಯವರೆಗೆ ಯಾವುದೇ ಆರ್ಥಿಕ ವರ್ಷದಲ್ಲಿ ವ್ಯವಹಾರ ಗಳಿಕೆಯು ರೂ. 100.00 ಕೋಟಿ ಮೀರುವಂತಿಲ್ಲ.

- ವರ್ಷಾವಧಿ: ಯಾವುದೇ Agri- Startup ನೋಂದಣಿಯಿಂದ ಇಲ್ಲಿಯವರೆಗೆ 10 ವರ್ಷ ಮೀರಿರುವಂತಿಲ್ಲ
- ಕಾರ್ಯವೈಖರಿ: Agri- Startup ಗಳು ಕೃಷಿ ವಲಯಕ್ಕೆ ಸಂಬಂಧಿಸಿದ್ದಾಗಿದ್ದು ನೂತನ ಆವಿಷ್ಕಾರಗಳು, ಉಪಯೋಗಕಾರಿ ಉತ್ಪನ್ನಗಳು ಹಾಗೂ ಸೇವೆಗಳನ್ನು ಒಳಗೊಂಡಿದ್ದು ಉದ್ಯೋಗ ಸೃಜನೆ ಸಾಮರ್ಥ್ಯ ಹೊಂದಿರಬೇಕು.

**14.ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ:** ಈ ಯೋಜನೆಯಡಿ ಬತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಭತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ ಹಾಗೂ ಕೃಷಿ ಉಪಕರಣಗಳನ್ನು ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಿಗೆ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹ ಧನ ನೀಡಲಾಗುತ್ತಿದೆ.

ಸದರಿ ಯೋಜನೆಯಡಿ:-

- ಎಲ್ಲಾ ರೈತರು ಅರ್ಹರಾಗಿದ್ದು, FRUITS Portal ನಲ್ಲಿ ಕಡ್ಡಾಯವಾಗಿ ನೋಂದಣಿ ಹೊಂದಿರಬೇಕು.
- ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆಯ ಅನುಷ್ಠಾನ ಕುರಿತು ಭಾರತ ಸರ್ಕಾರದ ನಿರ್ಣಯದಂತೆ ಯೋಜನೆಯ ಒಟ್ಟಾರೆ ಅನುದಾನದಲ್ಲಿ ವಿಶೇಷ ಘಟಕ ಉಪಯೋಜನೆಗೆ ಮತ್ತು ಗಿರಿಜನ ಉಪ ಯೋಜನೆಗೆ ಮೀಸಲಿರಿಸಿರುವ ಅನುದಾನವನ್ನು ಆಯಾ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನಸಂಖ್ಯೆ ಮತ್ತು ಭೂ ಹಿಡುವಳಿಯನ್ನಾಧರಿಸಿ ನಿಗದಿಪಡಿಸಿ ಬಿಡುಗಡೆಗೊಳಿಸಲಾಗುವುದು.
- ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಅನುದಾನದ ಕನಿಷ್ಠ ಶೇ.33 ರಷ್ಟು ಹಾಗು ಮಹಿಳಾ ರೈತರಿಗೆ ಅನುದಾನದ ಕನಿಷ್ಠ ಶೇ.30 ರಷ್ಟನ್ನು ಮೀಸಲಿರಿಸುವುದು.
- ಒಂದು ಹಂಗಾಮಿನಲ್ಲಿ ಯೋಜನೆಯ ವಿವಿಧ ಘಟಕಗಳಡಿ ಸಹಾಯಧನವನ್ನು ಪಡೆಯಲು ಎಲ್ಲಾ ವರ್ಗದ ರೈತರಿಗೂ 5 ಹೆಕ್ಟೇರ್ ಕ್ಷೇತ್ರ ವಿಸ್ತೀರ್ಣವನ್ನು ಮಿತಿಗೊಳಿಸಲಾಗಿರುತ್ತದೆ.
- ಒಂದು ಹಂಗಾಮಿನಲ್ಲಿ ಪ್ರಾತ್ಯಕ್ಷಿಕೆಯಡಿ ಸಹಾಯಧನ ಪಡೆಯಲು ಎಲ್ಲಾ ವರ್ಗದ ಫಲಾನುಭವಿ ರೈತರುಗಳಿಗೆ ಗರಿಷ್ಟ 2 ಹೆಕ್ಟೇರ್ ಕ್ಷೇತ್ರ ವಿಸ್ತೀರ್ಣವನ್ನು ಮಿತಿಗೊಳಿಸಲಾಗಿರುತ್ತದೆ.

**15.ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಅನುಷ್ಠಾನ ಮಾಡಲಾಗುತ್ತಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅನುಷ್ಠಾನಕ್ಕೆ ತೋಟಗಾರಿಕೆ ಇಲಾಖೆಯು ನೋಡಲ್ ಇಲಾಖೆಯಾಗಿರುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು

60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಸಹಾಯಧನವನ್ನು ಸೇರಿಸಿ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ.

ಸದರಿ ಯೋಜನೆಯಡಿ:-

- ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ತುಂತುರು ನೀರಾವರಿಗೆ ಶೇ.90 ರ ಸಹಾಯಧನ.
- ಸಣ್ಣ / ಅತಿ ಸಣ್ಣ / ಪ.ಜಾ / ಪ.ಪಂ. ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಹನಿ ನೀರಾವರಿಗೆ ಶೇ.90 ರ ಸಹಾಯಧನ.
- ಉಳಿದ ಎಲ್ಲಾ ರೈತರ ವರ್ಗಕ್ಕೆ 5.0 ಹೆಕ್ಟೇರ್ ಪ್ರದೇಶದವರೆಗೆ ಶೇ.45 ರ ಸಹಾಯಧನ.
- ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ, ಒಮ್ಮೆ ಸೂಕ್ಷ್ಮ ನೀರಾವರಿ ಸೌಲಭ್ಯ ಪಡೆದ ರೈತರು 7 ವರ್ಷಗಳ ನಂತರ ಮತ್ತೆ ಸೂಕ್ಷ್ಮ ನೀರಾವರಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಆದರೆ, ರಾಜ್ಯದ ಎಲ್ಲಾ ರೈತರಿಗೂ ಪರಿಶಿಷ್ಟ ಜಾತಿ ಹಾಗು ಪರಿಶಿಷ್ಟ ಪಂಗಡದ ರೈತರನ್ನು ಹೊರತು ಪಡಿಸಿ ಸದರಿ ಯೋಜನೆಯ ಸೌಲಭ್ಯ ನೀಡುವ ದೃಷ್ಟಿಯಿಂದ, 7 ವರ್ಷಗಳ ನಂತರ ಸದರಿ ಸೌಲಭ್ಯ ನೀಡುವುದನ್ನು ಕಡಿತಗೊಳಿಸಿ, ಕೇವಲ ಒಂದು ಬಾರಿಗೆ ಮಿತಿಗೊಳಿಸಲಾಗಿದೆ.
- ಇದಕ್ಕಾಗಿ Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ನೀರಾವರಿ ಸೌಲಭ್ಯ ಹೊಂದಿರುವ ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಆರ್.ಟಿ.ಸಿ. (ಪಹಣಿ) ಯೊಂದಿಗೆ ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು ಹಾಗೂ ಕೆ-ಕಿಸಾನ್‌ನಲ್ಲಿ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಪ್ ಲೋಡ್ ಮಾಡಬೇಕು. ರೈತರು ಜೇಷ್ಠತೆ ಹಾಗೂ ಅನುದಾನ ಲಭ್ಯತೆಯ ಆಧಾರದ ಮೇರೆಗೆ ದಾಖಲಾತಿಗಳನ್ನು ಸಲ್ಲಿಸಿದ ರೈತರಿಗೆ ವಿತರಿಸಿದ / ರೈತರ ಹೊಲದಲ್ಲಿ ಅಳವಡಿಸಿದ ಸೂಕ್ಷ್ಮ ನೀರಾವರಿ ಸಲಕರಣೆಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ.

**16.ಕೃಷಿ ವಿಸ್ತರಣೆ ಉಪ ಅಭಿಯಾನ:** ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯು ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರಿ/ ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ. ಯೋಜನೆಯಡಿ ಆಯೋಜಿಸುವ ವಿಸ್ತರಣಾ ಕಾರ್ಯಕ್ರಮಗಳಲ್ಲಿ ಎಲ್ಲಾ ವರ್ಗದ ರೈತರು / ರೈತ ಮಹಿಳೆಯರ ಪಾಲ್ಗೊಳ್ಳುವಿಕೆ ಅವಕಾಶವಿರುತ್ತದೆ.

**17. ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM):** ರಾಜ್ಯದಲ್ಲಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು, ಕೃಷಿ ಕಾರ್ಮಿಕರ ಸಮಸ್ಯೆಯನ್ನು ನೀಗಿಸಲು, ಹೆಚ್ಚಿನ ಇಳುವರಿ ಪಡೆಯಲು ನೆರವಾಗುವಂತೆ ಸಹಕಾರಿಯಾಗಲು ಹಾಗೂ ಕ್ಷೇತ್ರ ಶಕ್ತಿಯನ್ನು (ಪ್ರಸ್ತುತವಿರುವ 2.115 KW/ Ha to 2.5kW/Ha by 2023 and 4.00kW/ha by 2030) ಹೆಚ್ಚಿಸಲು ಕೃಷಿ ಯಾಂತ್ರೀಕರಣ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ರೈತರಿಗೆ ಟ್ರ್ಯಾಕ್ಟರ್(45HP ವರೆಗೆ), ಪವರ್ ಟಿಲ್ಲರ್‌ಗಳ ಜೊತೆಗೆ ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಶಕ್ತಿ ಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಶಕ್ತಿ ಚಾಲಿತ ಅಂತರ ಬೇಸಾಯ ಉಪಕರಣಗಳು, ಕೊಯ್ಲು ಮತ್ತು ಸಂಸ್ಕರಣಾ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ಡೀಸೆಲ್ ಪಂಪ್‌ಸೆಟ್ ಗಳು ಇತ್ಯಾದಿ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. ಹೀಗೆ ಉಳುಮೆಯಿಂದ ಕೊಯ್ಲಿನವರೆಗೆ ಹಾಗು ಕೊಯ್ಲು ನಂತರ ಉಪಯುಕ್ತವಾಗುವ ವಿವಿಧ ನಮೂನೆಯ ಕೃಷಿ ಉಪಕರಣಗಳನ್ನು ಸಹಾಯಧನದಡಿ ರೈತರಿಗೆ ಒದಗಿಸಲಾಗುತ್ತಿದೆ.

ಸದರಿ ಯೋಜನೆಯಡಿ:-

- ಕೃಷಿ ಯಂತ್ರೋಪಕರಣಗಳಿಗೆ ಸಂಬಂಧಿಸಿದಂತೆ ಪ್ರತಿ ರೈತ ಫಲಾನುಭವಿಗಳಿಗೆ (Individual farmers) (ಟ್ರಾಕ್ಟರ್ ಹೊರತುಪಡಿಸಿ) ಸಾಮಾನ್ಯ ರೈತರಿಗೆ ಶೇ.50 ರಷ್ಟು ಸಹಾಯಧನ ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಟ ಮಿತಿ ರೂ.1.00 ಲಕ್ಷದವರೆಗೆ ನೀಡಲಾಗುತ್ತಿದೆ.
- ರೈತರು ಒಂದಕ್ಕಿಂತ ಹೆಚ್ಚು ವಿವಿಧ ಉಪಕರಣಗಳಿಗೆ (ಪುನರಾವರ್ತನೆಯಾಗದಂತೆ) ಗರಿಷ್ಠ ರೂ.1.00 ಲಕ್ಷದವರೆಗೆ ಸಹಾಯಧನವನ್ನು ಪಡೆಯಬಹುದಾಗಿರುತ್ತದೆ.
- 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.
- ರೈತರು ಯಾವುದಾದರು ಉಪಕರಣವನ್ನು ರಿಯಾಯಿತಿ ದರದಲ್ಲಿ ಕೃಷಿ ಇಲಾಖೆ ಮತ್ತು ಕೃಷಿ ಸಂಬಂಧಿತ ಇಲಾಖೆಗಳ ಮೂಲಕ ಪಡೆದಿದ್ದಲ್ಲಿ, ಅದೇ ಉಪಕರಣವನ್ನು ಮುಂದಿನ ಏಳು ಆರ್ಥಿಕ ವರ್ಷಗಳಲ್ಲಿ ರಿಯಾಯಿತಿ ದರಗಳಲ್ಲಿ ಪಡೆಯಲು ಅರ್ಹರಿರುವುದಿಲ್ಲ.
- ಕೇಂದ್ರ ಸರ್ಕಾರವು ನಿಗದಿ ಪಡಿಸಿರುವ ತಾಂತ್ರಿಕ ಮಾನದಂಡಗಳನ್ನು ಪರಿಗಣಿಸಿ ಯಂತ್ರೋಪಕರಣಗಳನ್ನು ಸರಬರಾಜು ಮಾಡುವ ಸಂಸ್ಥೆಗಳನ್ನು ಕೃಷಿ ಇಲಾಖೆಯ ವತಿಯಿಂದ ಎಂಪ್ಯಾನೆಲ್ ಮಾಡಲಾಗಿರುತ್ತದೆ. ಸದರಿ ಎಂಪ್ಯಾನಲ್/ದರ ಕರಾರು ಸಂಸ್ಥೆಗಳ ಎಂಪ್ಯಾನಲ್‌ಗೊಂಡಿರುವ ಯಂತ್ರೋಪಕರಣಗಳನ್ನು ಮಾತ್ರ ಸಹಾಯಧನ ಯೋಜನೆಯಡಿ ವಿತರಿಸಲಾಗುತ್ತಿದೆ.
- FRUITS (Farmers Registration and Unified Beneficiary Information System) Portal ತಂತ್ರಾಂಶದಲ್ಲಿ ನೊಂದಾಯಿತರಾದ ರೈತರು ಮಾತ್ರ ತಾವು

ಇಚ್ಛಿಸುವ ಯಂತ್ರೋಪರಕರಣಗಳಿಗೆ ಕೆ-ಕಿಸಾನ್ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

- ರೈತರು ತಾವು ಇಚ್ಛಿಸುವ ಯಂತ್ರೋಪಕರಣಗಳಿಗೆ ಕೆ-ಕಿಸಾನ್ ಪೋರ್ಟಲ್‌ನ Citizen Centric login (kkisan.karnataka.gov.in) ಅಥವಾ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.
- ರೈತರು ಸಲ್ಲಿಸುವ ಅರ್ಜಿಗಳ ಜೇಷ್ಠತೆ ಆಧಾರದ ಮೇಲೆ, ರೈತರ ವರ್ಗದ ಆಧಾರದ ಮೇಲೆ ಮತ್ತು ಅನುದಾನ ಲಭ್ಯತೆ ಆಧಾರದ ಮೇಲೆ ಸಹಾಯಧನ ಯೋಜನೆಗಳಡಿ ರೈತರಿಗೆ ಯಂತ್ರೋಪಕರಣಗಳನ್ನು ವಿತರಿಸಲಾಗುತ್ತಿದೆ.

**18.ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮ:** ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆ, ತಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವ ಉದ್ದೇಶದಿಂದ ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟಾರೆಯಾಗಿ 4000 ಸಮಗ್ರ ಕೃಷಿ ಪದ್ಧತಿ ಮಾದರಿಗಳನ್ನು ಅನುಷ್ಠಾನಗೊಳಿಸಲು ಕಾರ್ಯಕ್ರಮವನ್ನು ರೂಪಿಸಿದ್ದು ಅದರಂತೆ ಅನುಷ್ಠಾನ ಮಾಡಲಾಗುತ್ತಿದೆ.

**19.ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds):** ಈ ಯೋಜನೆಯಡಿ ಎಣ್ಣೆ ಕಾಳುಗಳ ಉತ್ಪಾದನೆಯನ್ನು ಹೆಚ್ಚಿಸಲು ನೂತನ/ಸುಧಾರಿತ ತಾಂತ್ರಿಕತೆಗಳ ದೊಡ್ಡ ಪ್ರಮಾಣದ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಪೀಡೆನಾಶಕಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ, ಕೃಷಿ ಉಪಕರಣಗಳು ಹಾಗೂ ನೀರು ಒದಗಿಸುವ ಪೈಪುಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೇ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಪ್ರತಿ ಕ್ವಿಂಟಾಲ್ ಬಿತ್ತನೆ ಬೀಜೋತ್ಪಾದನೆಗೆ ರೂ.2500/-ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.

ಸದರಿ ಯೋಜನೆಯಡಿ:-

- ಎಲ್ಲಾ ರೈತರು ಅರ್ಹರಾಗಿದ್ದು, FRUITS Portal ನಲ್ಲಿ ಕಡ್ಡಾಯವಾಗಿ ನೋಂದಣಿ ಹೊಂದಿರಬೇಕು.
- ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯ ಅನುಷ್ಠಾನ ಕುರಿತು ಭಾರತ ಸರ್ಕಾರದ ನಿರ್ಣಯದಂತೆ ಯೋಜನೆಯ ಒಟ್ಟಾರೆ ಅನುದಾನದಲ್ಲಿ ವಿಶೇಷ ಘಟಕ ಉಪಯೋಜನೆಗೆ ಮತ್ತು ಗಿರಿಜನ ಉಪಯೋಜನೆಗೆ ಮೀಸಲಿರಿಸಿರುವ ಅನುದಾನವನ್ನು ಆಯಾ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನಸಂಖ್ಯೆ ಮತ್ತು ಭೂ ಹಿಡುವಳಿಯನ್ನಾಧರಿಸಿ ನಿಗಧಿಪಡಿಸಿ ಬಿಡುಗಡೆಗೊಳಿಸಲಾಗುತ್ತಿದೆ.
- ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಅನುದಾನದ ಕನಿಷ್ಟ ಶೇ.33 ರಷ್ಟು ಹಾಗು ಮಹಿಳಾ ರೈತರಿಗೆ ಅನುದಾನದ ಕನಿಷ್ಟ ಶೇ.30 ರಷ್ಟನ್ನು ಮೀಸಲಿರಿಸುವುದು.
- ಅಧ್ಯಕ್ಷರು, ಜಿಲ್ಲಾ ಮಟ್ಟದ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ ಎಣ್ಣೆಕಾಳು ಕಾರ್ಯಕಾರಿ ಸಮಿತಿ ಇವರಿಂದ ರಚಿಸಲ್ಪಟ್ಟ ಬೀಜ ಸಮಿತಿಯು

ಜಿಲ್ಲೆಯಲ್ಲಿ ಬಂದಿರುವ ಬೀಜ ಬೇಡಿಕೆ, ವಿತರಣೆ ಮತ್ತು ಫಲಾನುಭವಿಗಳ ಪಟ್ಟಿಯನ್ನು ಪರಿಶೀಲಿಸುವುದು. ಬಿತ್ತನೆ ಬೀಜ ಸಹಾಯಧನದ ಅನುದಾನವು ಕೇಂದ್ರ ಮಟ್ಟದಲ್ಲಿ ವಿತರಣೆಯಾಗಿದ್ದಲ್ಲಿ ವಿತರಣೆಯ ನಂತರ ಫಲಾನುಭವಿಗಳ ಪಟ್ಟಿಯನ್ನು ಐಚ್ಛಿಕವಾಗಿ ಪರಿಶೀಲಿಸಿ ಅನುಮೋದಿಸಲಾಗುತ್ತದೆ.

20. **ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ:** ವ್ಯಕ್ತಿಗತ ಕಿರು ಉದ್ದಿಮೆಗಳಿಗೆ ಬೆಂಬಲ, ರೈತ ಉತ್ಪಾದಕರ ಸಂಸ್ಥೆಗಳು/ ಉತ್ಪಾದಕ ಸೊಸೈಟಿಗಳಿಗೆ ಸಹಾಯಧನ, ಸ್ವಸಹಾಯ ಸಂಘಗಳ ಸದಸ್ಯರಿಗೆ ಕಾರ್ಯ ನಿರ್ವಹಣಾ ಬಂಡವಾಳ ಹಾಗೂ ಪರಿಕರಗಳ ಖರೀದಿಗೆ ಪ್ರಾಥಮಿಕ ಬಂಡವಾಳ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆಗೆ ಬೆಂಬಲ, ರಾಜ್ಯದ ತಾಂತ್ರಿಕ ಸಂಸ್ಥೆಗಳಲ್ಲಿ ಆಹಾರ ಸಂಸ್ಕರಣಾ ಉದ್ಯಮಿಗಳಿಗೆ ತರಬೇತಿ ನೀಡಲು ಹಾಗೂ ಪ್ರಾಯೋಗಿಕ ಉತ್ಪಾದನೆ ಕೈಗೊಳ್ಳಲು ಇನ್ ಕ್ಯುಬೇಷನ್ ಕೇಂದ್ರಗಳ ಸ್ಥಾಪನೆಗೆ ಅನುದಾನವನ್ನು ನೀಡಲಾಗುವುದು. KAPPEC ಸಂಸ್ಥೆಯು ಈ ಯೋಜನೆಯ ಅನುಷ್ಠಾನಕ್ಕೆ ನೋಡಲ್ ಇಲಾಖೆಯಾಗಿರುತ್ತದೆ.
   ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅನುದಾನವನ್ನು ನೀಡಲಾಗುತ್ತಿದೆ.

21. **ಮಣ್ಣು ಆರೋಗ್ಯ ಮತ್ತು ಫಲವತ್ತತೆ ಯೋಜನೆ (ಆರ್.ಕೆ.ವಿ.ವೈ):** ಮಣ್ಣು ಮಾದರಿ ಸಂಗ್ರಹಣೆ, ವಿಶ್ಲೇಷಣೆ ಮತ್ತು ಮಣ್ಣು ಆರೋಗ್ಯ ಚೀಟಿ ವಿತರಣೆ, ಪ್ರಾತ್ಯಕ್ಷಿಕೆ,ತರಬೇತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ( ರೂ 0.05ಲಕ್ಷಗಳು ಪ್ರತಿ ಘಟಕ), ಸಮಸ್ಯಾತ್ಮಕ ಮಣ್ಣುಗಳ ನಿರ್ವಹಣೆ: ಕೃಷಿ ಸುಣ್ಣ/ಜಿಪ್ಸಂ, ಹಸಿರೆಲೆ ಗೊಬ್ಬರ, ಬದುಗಳ ನಿರ್ಮಾಣ ಪ್ರತಿ ಹೆಕ್ಟೇರ್ ಗೆ ನಿಗದಿಪಡಿಸಿದ ದರವನ್ನು ಪರಿಕರಗಳ ರೂಪದಲ್ಲಿ ನೀಡಲಾಗುತ್ತದೆ. ಹೊಸ ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಸ್ಥಾಪನೆ, ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಬಲವರ್ಧನೆ, ರಸಗೊಬ್ಬರ ನಿಯಂತ್ರಣ ಪ್ರಯೋಗಾಲಯಗಳ ಬಲವರ್ಧನೆ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

**LCQ 1019 ಅನುಬಂಧ- 2**

~~ಪೂರಕ ಟಿಪ್ಪಣಿ~~ **(ಪ್ರಶ್ನೆ ಸಂ: ಆ)**

**2023-24ನೇ ಸಾಲಿನ ರಾಜ್ಯದ ಕೃಷಿ ಇಲಾಖೆಯಲ್ಲಿ ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಅನುದಾನದ ವಿವರ**

**(ಜನವರಿ 2024ರ ಅಂತ್ಯಕ್ಕೆ) (ರೂ.ಲಕ್ಷಗಳಲ್ಲಿ)**

| ಕ್ರ.ಸಂ | ಯೋಜನೆ ಮತ್ತು ಲೆಕ್ಕ ಶೀರ್ಷಿಕೆ | ಬಿಡುಗಡೆ |
|---|---|---|
| I | **ರಾಜ್ಯ ವಲಯ ಯೋಜನೆಗಳು** | |
| 1 | ಮುಖ್ಯಮಂತ್ರಿ ರೈತ ವಿದ್ಯಾನಿಧಿ (2202-80-107-0-06) | 15480.00 |
| 2 | ಕೃಷಿ ಆಯುಕ್ತಾಲಯ (2401-00-001-1-01) | 14794.65 |
| 3 | ಖಾಲಿ ಹುದ್ದೆಗಳಿಗಾಗಿ ಅನುದಾನ (2401-00-001-1-50) | 0.00 |
| 4 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ (2401-00-001-1-75) | 44.84 |
| 5 | ರೈತರ ಪ್ರೋತ್ಸಾಹ & ಬೆಂಬಲ ಯೋಜನೆಗಳು (2401-00-102-0-28) | 358.67 |
| 6 | ರೋಗಗಳಿಂದ ಹಾನಿಗೊಳಗಾದ ಬೆಳೆಗಳಿಗೆ ಪರಿಹಾರ (2401-00-102-0-32) | 22300.00 |
| 7 | ಕೃಷಿ ಪರಿಕರಗಳು & ಗುಣಮಟ್ಟ ನಿಯಂತ್ರಣ (2401-00-103-0-15) | 37788.31 |
| 8 | ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಕಾರ್ಯಕ್ರಮಗಳು (2401-00-104-0-12) | 833.33 |
| 9 | ಹೊಸ ಬೆಳೆ ವಿಮಾ ಯೋಜನೆ (2401-00-104-0-12) | 49998.00 |
| 10 | ಬೆಳೆ ಸಮೀಕ್ಷೆ (2401-00-111-0-10) | 6499.98 |
| 11 | ಕೃಷಿ ಭಾಗ್ಯ (2401-00-102-0-27) | 0.00 |
| 12 | ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಗೆ ರಾಜ್ಯದ ಹೆಚ್ಚುವರಿ ಪಾಲಿನ ಅನುದಾನ (2401-00-108-1-15) | 9376.03 |
| 13 | ಕೃಷಿ ಮೂಲಭೂತ ಸೌಕರ್ಯ (4401-00-001-1-01) | 1123.80 |
| | **ರಾಜ್ಯ ವಲಯ ಯೋಜನೆಗಳ - ಒಟ್ಟು** | **158597.62** |
| II | **ಜಿಲ್ಲಾ ವಲಯ ಯೋಜನೆಗಳ ಒಟ್ಟು (2401-00-196-1-01 & 2401-00-197-1-01)** | **21734.19** |
| II | **ಕೇಂದ್ರ ಪುರಸ್ಕೃತ ಯೋಜನೆಗಳು** | |
| 1 | ರಾಷ್ಟ್ರೀಯ ಆಹಾರ ಸುರಕ್ಷತೆ ಮಿಶನ್ (NFSM) (2401-00-102-0-08 & 2401-00-102-0-09) | 14610.76 |
| 2 | ಬಿತ್ತನೆ ಬೀಜ ಮತ್ತು ಬಿತ್ತನೆ ಸಾಮಗ್ರಿ ಉಪ ಅಭಿಯಾನ (SMSP) (2401-00-103-0-22 & 2401-00-103-0-23) | 0.00 |
| 4 | ಕೃಷಿ ವಿಸ್ತರಣೆ ಉಪ ಅಭಿಯಾನ (SMAE) (2401-00-109-0-34 & 2401-00-109-0-35) | 1697.48 |
| 5 | ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) (2401-00-113-0-02 & 2401-00-113-0-03) | 12923.32 |
| 6 | ರಾಷ್ಟ್ರೀಯ ಖಾದ್ಯತೈಲ ಅಭಿಯಾನ-ಎಣ್ಣೆಕಾಳು (NMEO-oilseeds) (2401-00-114-0-01 & 2401-00-114-0-06) | 632.08 |
| 7 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (RKVY) (2401-00-800-1-57 & 2401-00-800-1-73) | 12210.00 |
| 8 | ಮಣ್ಣಿನ ಫಲವತ್ತತೆಯ ಯೋಜನೆ (2402-00-101-0-03 & 2402-00-101-0-04) | 700.00 |
| 9 | ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ(PMFME) (2408-01-103-0-01 & 2408-01-103-0-02) | 4539.98 |
| | **ಕೇಂದ್ರ ಪುರಸ್ಕೃತ ಯೋಜನೆಗಳು - ಒಟ್ಟು** | **47313.63** |
| | **ಎಲ್ಲಾ ಯೋಜನೆಗಳ ಒಟ್ಟು** | **227645.43** |

# ಅನುಬಂಧ-3

## ಜಲಾನಯನ ಅಭಿವೃದ್ಧಿ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ವಿವಿಧ ಬಗೆಯ ಯೋಜನೆಗಳು ಮತ್ತು ಅನುದಾನ ಬಿಡುಗಡೆ ವಿವರ

**LCQ-1019** (ರೂ.ಲಕ್ಷಗಳಲ್ಲಿ )

| ಕ್ರ.ಸಂ | ಯೋಜನೆ | ಬಿಡುಗಡೆಯಾದ ಅನುದಾನ (ಜನವರಿ - 2024ರ ವರೆಗೆ) |
|---|---|---|
| 1 | ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC- PMKSY 2.0) (ಕೇಂದ್ರ ಪುರಸ್ಕೃತ ಯೋಜನೆ) (*) | 11000.00 |
| 2 | ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ (RAD) RKVY-RAFTAAR) (ಕೇಂದ್ರ ಪುರಸ್ಕೃತ ಯೋಜನೆ) (*) | 1148.61 |
| 3 | ವಿಶ್ವ ಬ್ಯಾಂಕ್ ನೆರವಿನ REWARD ಯೋಜನೆ (*) | 7500.00 |
| 4 | ನಬಾರ್ಡ್ ಆರ್.ಐ.ಡಿ.ಎಫ್ (ಟ್ರಾಂಚೆ-27) ನೆರವಿನ ಜಲಾನಯನ ಅಭಿವೃದ್ಧಿ ಯೋಜನೆಗಳು | 333.42 |
| 5 | ರೈತ ಉತ್ಪಾದಕರ ಸಂಸ್ಥೆಗಳ ಉತ್ತೇಜನ (FPOs) | 1724.98 |
| 6 | 10,000 ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನ (ಕೇಂದ್ರ ವಲಯ) | 880.64 |
| | **ಇತರೆ ಇಲಾಖೆಯ ಅನುದಾನದಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು** | |
| 7 | ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ- ಇತರೆ ಉಪಚಾರಗಳು (PMKSY-OI) | 2726.44 |
| 8 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ತಡೆಅಣೆ ನಿರ್ಮಾಣ (RKVY-CD) | 1864.61 |
| 9 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ ನಿರ್ಮಾಣ (RKVY- RPS) | 315.30 |
| 10 | ಅಟಲ್ ಭೂಜಲ್ | 424.92 |

(*) ವೆಚ್ಚದಲ್ಲಿ ಪ್ರಾರಂಭಿಕ ಶಿಲ್ಕು ಸೇರಿರುತ್ತದೆ.

LCQ - 1019 ಅನುಬಂಧ-4

**2021-22ನೇ ಹಾಗೂ 2022-23ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿರುವ ವಿವಿಧ ಯೋಜನೆ ಹಾಗೂ ಲೆಕ್ಕಶೀರ್ಷಿಕೆಗಳಡಿ ಮಂಜೂರು ಮಾಡಿದ ಹಾಗೂ ಬಿಡುಗಡೆ ಮಾಡಿದ ಅನುದಾನದ ವಿಧಾನಸಭಾ ಕ್ಷೇತ್ರವಾರು ವಿವರ (ರೂ.ಲಕ್ಷಗಳಲ್ಲಿ)**

ಜಿಲ್ಲೆ: ಬೀದರ

| ಕ್ರ.ಸಂ. | ಯೋಜನೆ | ಲೆಕ್ಕ ಶೀರ್ಷಿಕೆ | 2021-22 | | | 2022-23 | | |
|---|---|---|---|---|---|---|---|---|
| | | | ಬಿಡುಗಡೆ ಮಾಡಿರುವ ಅನುದಾನ | ವೆಚ್ಚ | ಫಲಾನುಭವಿಗಳ ಸಂಖ್ಯೆ | ಬಿಡುಗಡೆ ಮಾಡಿರುವ ಅನುದಾನ | ವೆಚ್ಚ | ಫಲಾನುಭವಿಗಳ ಸಂಖ್ಯೆ |
| | **ರಾಜ್ಯ ವಲಯ ಯೋಜನೆಗಳು** | | | | | | | |
| 1 | ಕೃಷಿ ಆಯುಕ್ತಾಲಯ | 2401-00-001-1-01 | 9.74 | 9.65 | 0 | **152.31** | **143.19** | **0** |
| 2 | ಕೃಷಿ ಭಾಗ್ಯ | 2401-00-102-0-27 | 0.00 | 0.00 | 0 | **0** | **0** | **0** |
| 3 | ರೈತರ ಪ್ರೋತ್ಸಾಹ & ಬೆಂಬಲ ಯೋಜನೆಗಳು | 2401-00-102-0-28 | 0.00 | 0.00 | 0 | **0** | **0** | 0 |
| 4 | ಕೃಷಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ | 2401-00-103-0-15 | 3521.66 | 3520.47 | 152468 | **3011.5** | **3008.47** | **163954** |
| 5 | ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಕಾರ್ಯಕ್ರಮಗಳು | 2401-00-104-0-12 | 0.00 | 0.00 | 0 | **0** | **0** | 0 |
| 6 | ಕೃಷಿ ವಿಸ್ತರಣೆ ಮತ್ತು ತರಬೇತಿ | 2401-00-109-0-21 | 81.10 | 74.12 | 0 | **8.1** | **8.05** | 0 |
| 7 | ಹೊಸ ಬೆಳೆ ವಿಮಾ ಯೋಜನೆ | 2401-00-110-0-07 | 29.72 | 27.32 | 0 | **10** | **10** | 0 |
| 8 | ಕೃಷಿ ಮೂಲಭೂತ ಸೌಕರ್ಯ | 4401-00-001-1-01 | 0.00 | 0.00 | 0 | **0** | **0** | 0 |
| | **ರಾಜ್ಯ ವಲಯ ಯೋಜನೆಗಳ ಒಟ್ಟು** | | **3642.22** | **3631.56** | **152468** | **3181.91** | **3169.71** | **163954** |
| | **ಕೇಂದ್ರ ಪುರಸ್ಕೃತ ಯೋಜನೆಗಳು** | | | | | | | |
| 1 | ರಾಷ್ಟ್ರೀಯ ಆಹಾರ ಸುರಕ್ಷತ ಮಿಶನ್ | 2401-00-102-0-08 | 402.16 | 376.46 | **57525** | **743.77** | **732.34** | 124659 |
| 2 | NMSA-ಮುಖ್ಯಮಂತ್ರಿಗಳ ಸೂಕ್ಷ್ಮ ನೀರಾವರಿ ಯೋಜನೆ | 2401-00-108-1-15 | 1355.00 | 1354.50 | 6010 | **1317.28** | **1110.82** | 8305 |
| 3 | ಕೃಷಿ ವಿಸ್ತರಣೆ ಉಪ ಅಭಿಯಾನ (SMAE) | 2401-00-109-0-34 | 58.18 | 58.18 | 4274 | **117.57** | **117.57** | 5398 |
| 4 | ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ (NMEO) | 2401-00-114-0-01 & 2401-00-114-0-06 | 0.00 | 0.00 | 2920 | **29.8** | **29.7** | 2148 |
| 5 | ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) | 2401-00-113-0-02 | 500.23 | 499.57 | 1222 | **211.61** | **208.33** | 532 |
| 6 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ | 2401-00-800-1-57 | 57.21 | 57.21 | 12628 | **25** | **25** | 8803 |
| 7 | ಮಣ್ಣಿನ ಫಲವತ್ತತೆಯ ಯೋಜನೆ | 2402-00-101-0-03 | 0.00 | 0.00 | 0 | **0** | **0** | 0 |
| | **ಕೇಂದ್ರ ಪುರಸ್ಕೃತ ಯೋಜನೆಗಳು - ಒಟ್ಟು** | | **1979.70** | **1957.71** | **84579** | **1583.69** | **1373.85** | **149845** |
| | **ಎಲ್ಲಾ ಒಟ್ಟು** | | **5621.92** | **5589.27** | **237047.00** | **4765.60** | **4543.56** | **313799.00** |

LCQ-1019 ಅನುಬಂಧ-5

| 2021-22 & 2022-23 ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿರುವ ವಿವಿಧ ಯೋಜನೆ ಹಾಗೂ ಲೆಕ್ಕಶೀರ್ಷಿಕೆಗಳಡಿ ಮಂಜೂರು ಮಾಡಿದ ಹಾಗೂ ಬಿಡುಗಡೆಯಾದ ಅನುದಾನ, ವೆಚ್ಚ ಹಾಗೂ ಫಲಾನುಭವಿಗಳ ಸಂಖ್ಯೆಯ ವಿವರ | | | | | | | | |
|---|---|---|---|---|---|---|---|---|
| ಕ್ರ. ಸಂ | ಯೋಜನೆ | ಲೆಕ್ಕ ಶೀರ್ಷಿಕೆ | ಕಲಬುರಗಿ ಜಿಲ್ಲೆ | | | | | |
| | | | 2021-22 | | | 2022-23 | | |
| | | | ಬಿಡುಗಡೆ | ವೆಚ್ಚ | ಫಲಾನುಭವಿಗಳ ಸಂಖ್ಯೆ | ಬಿಡುಗಡೆ | ವೆಚ್ಚ | ಫಲಾನುಭವಿಗಳ ಸಂಖ್ಯೆ |
| 1. ರಾಜ್ಯ ವಲಯ ಯೋಜನೆಗಳು | | | | | | | | |
| 1 | ಕೃಷಿ ಆಯುಕ್ತಾಲಯ | 2401-00-001-1-01 | 23.20 | 23.20 | 41 | 136.94 | 136.57 | 47 |
| 2 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ | 2401-00-001-1-75 | 128.83 | 127.82 | 305 | 60.99 | 60.94 | 91 |
| 3 | ಕೃಷಿ ಪರಿಕರಗಳು & ಗುಣಮಟ್ಟ ನಿಯಂತ್ರಣ | 2401-00-103-0-15 | 1548.19 | 1527.64 | 87873 | 2317.43 | 2311.02 | 87184 |
| 4 | ಸಾವಯವ ಕೃಷಿ ಮತ್ತು ಸಿರಿಧಾನ್ಯ | 2401-00-104-0-12 | 12.76 | 12.76 | 684 | 16.17 | 16.13 | 1055 |
| 6 | ಹೊಸ ಬೆಳೆ ವಿಮೆ ಯೋಜನೆ | 2401-00-111-0-07 | 15.32 | 15.27 | 481 | 11.93 | 11.89 | 445 |
| 7 | ಕೃಷಿ ಮೂಲಭೂತ ಸೌಕರ್ಯ | 4401-00-001-1-01 | 0.00 | 0.00 | 0 | 0.00 | 0.00 | 0 |
| ರಾಜ್ಯ ವಲಯ ಯೋಜನೆಗಳ - ಒಟ್ಟು | | | **1728.30** | **1706.69** | **89384** | **2543.46** | **2536.55** | **88822** |
| 2. ಕೇಂದ್ರ ಪುರಸ್ಕೃತ ಯೋಜನೆಗಳು | | | | | | | | |
| 1 | ರಾಷ್ಟ್ರೀಯ ಆಹಾರ ಸುರಕ್ಷತೆ ಮಿಷನ್ (NFSM) | 2401-00-102-0-08 | 1073.90 | 1061.01 | 18185 | 1197.37 | 1164.41 | 27920 |
| 2 | ರಾಷ್ಟ್ರೀಯ ಆಹಾರ ಸುರಕ್ಷತೆ ಮಿಷನ್ (NMEO) | 2401-00-102-0-08 | 0.00 | 0.00 | 0 | 26.32 | 12.80 | 1014 |
| 3 | ಕೃಷಿ ವಿಸ್ತರಣೆ ಉಪ ಅಭಿಯಾನ (ATMA) | 2401-00-109-0-34 | 51.24 | 51.24 | 267 | 127.88 | 126.43 | 1455 |
| 4 | ಕೃಷಿ ವಿಸ್ತರಣೆ ಉಪ ಅಭಿಯಾನ (SMAM) | 2401-00-113-0-02 | 847.49 | 844.49 | 3296 | 472.87 | 467.90 | 2088 |
| 5 | ಸೂಕ್ಷ್ಮ ನೀರಾವರಿ (PMKSY MI) | 2401-00-108-1-15 | 1775.79 | 1775.70 | 8141 | 1908.08 | 1905.97 | 8732 |
| 6 | RKVY | 2401-00-800-1-57 | 39.18 | 39.18 | 2755 | 52.32 | 52.28 | 1910 |
| ಕೇಂದ್ರ ಯೋಜನೆಗಳ ಒಟ್ಟು | | | **3787.60** | **3771.62** | **32644** | **3784.84** | **3729.79** | **43119** |
| ಒಟ್ಟು | | | **5515.90** | **5478.31** | **122028** | **6328.30** | **6266.34** | **131941** |

**ಅನುಬಂಧ-6**

**ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ಸೌಲಭ್ಯ ಪಡೆದ ಕಲಬುರಗಿ ಮತ್ತು ಬೀದರ್ ಜಿಲ್ಲೆಯ ಫಲಾನುಭವಿಗಳ ವಿವರ**

**(LCQ-1019)**

| ಕ್ರ.ಸಂ | ಯೋಜನೆ | ಸೌಲಭ್ಯಗಳು | ಕಲಬುರಗಿ ಫಲಾನುಭವಿಗಳ ಸಂಖ್ಯೆ | | ಬೀದರ್ ಫಲಾನುಭವಿಗಳ ಸಂಖ್ಯೆ | |
|---|---|---|---|---|---|---|
| | | | 2021-22 | 2022-23 | 2021-22 | 2022-23 |
| 1 | ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ - ಜಲಾನಯನ ಅಭಿವೃದ್ಧಿ ಘಟಕ 1.0 (PMKSY-WDC1.0) | ತಡೆಅಣೆ | 3 | 0 | 0 | 0 |
| | | ಖುಷ್ಕಿ ತೋಟಗಾರಿಕೆ | 8 | 0 | 0 | 0 |
| 2 | ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ 2.0 (WDC-PMKSY 2.0) | ಕೇತ್ರಬದು | 0 | 2115 | 75 | 985 |
| | | ತಡೆಅಣೆ | 9 | 63 | 0 | 98 |
| | | ನಾಲಾ ಬದು | 0 | 0 | 3 | 11 |
| | | ಕೃಷಿ ಹೊಂಡ | 0 | 0 | 0 | 15 |
| | | ಬೊಲ್ಡರ್ ಚೆಕ್ | 0 | 0 | 0 | 622 |
| | | ಗೋಕಟ್ಟೆ | 0 | 24 | 0 | 12 |
| | | ಕೃಷಿ ಅರಣ್ಯ | 0 | 203 | 0 | 0 |
| | | ಖುಷ್ಕಿ ತೋಟಗಾರಿಕೆ | 0 | 64 | 0 | 0 |
| | | ತರಕಾರಿ ಕಿರುಚೀಲ | 738 | 418 | 0 | 0 |
| | | ಜಾನುವಾರು ಆಧಾರಿತ ಸಮಗ್ರ ಕೃಷಿ ಪದ್ಧತಿ | 0 | 179 | 0 | 0 |
| | | ಮೆಕ್ಕೆ ಜೋಳದ ಮೇವು ಬೀಜದ ಕಿರುಚೀಲ | 0 | 1821 | 0 | 2000 |
| | | ಮೇವು ಕತ್ತರಿಸುವ ಯಂತ್ರ | 0 | 103 | 0 | 98 |
| | | ಹಾಲು ಕರಿಯುವ ಯಂತ್ರ | 0 | 0 | 0 | 10 |
| | | ಹಸು ನೆಲ ಹಾಸಿಗೆ | 0 | 126 | 0 | 150 |
| 3 | ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು (PMKSY-OI) | ತಡೆಅಣೆ | 138 | 66 | 96 | 79 |
| | | ಗೋಕಟ್ಟೆ | 0 | 12 | 0 | 0 |
| | | ಕೃಷಿಹೊಂಡ | 0 | 32 | 0 | 9 |
| | | ಬೋರವೆಲ್ ನಿರ್ಮಾಣ | 0 | 1 | 0 | 0 |
| 4 | ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ-(RAD-RKVY-RAFTAAR) | ಜಾನುವಾರ ಆಧಾರಿತ ಸಮಗ್ರ ಕೃಷಿ ಪದ್ಧತಿ (ಹಸು/ಎಮ್ಮೆ) | 37 | 7 | 0 | 0 |
| | | ಜಾನುವಾರ ಆಧಾರಿತ ಸಮಗ್ರ ಕೃಷಿ ಪದ್ಧತಿ (ಕುರಿ/ಮೇಕೆ) | 80 | 9 | 140 | 34 |
| | | ಎರೆಹುಳು ತೊಟ್ಟಿ | 19 | 3 | 0 | 0 |
| | | ಕೃಷಿ ಅರಣ್ಯ | 25 | 0 | 0 | 0 |
| | | ಖುಷ್ಕಿ ತೋಟಗಾರಿಕೆ | 88 | 0 | 0 | 0 |
| 5 | ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ (WDPD) | ತಡೆಅಣೆ | 300 | 54 | 0 | 62 |
| | | ಕೇತ್ರಬದು | 0 | 0 | 161 | 0 |
| | | ಗೋಕಟ್ಟೆ | 8 | 60 | 0 | 0 |
| | | ಕೃಷಿ ಅರಣ್ಯ | 293 | 0 | 0 | 0 |
| | | ಖುಷ್ಕಿ ತೋಟಗಾರಿಕೆ | 38 | 40 | 105 | 97 |
| | | ತರಕಾರಿ ಕಿರುಚೀಲ | 0 | 700 | 0 | 0 |
| 6 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ - ತಡೆ ಅಣೆ ನಿರ್ಮಾಣ (RKVY-CD) | ತಡೆಅಣೆ | 36 | 45 | 38 | 60 |
| 7 | REWARD | ಗೋಕಟ್ಟೆ | 0 | 8 | 0 | 0 |